ವಿಜಯಪುರ | ಸಂಪುಟ 04 | ಸಂಚಿಕೆ 143 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಜುಲೈ, 28, 2026

"ನಿಂದಿಸಿದವರನ್ನೇ ನೆಚ್ಚಿಕೊಳ್ಳುವುದು ಪ್ರಧಾನಿ ನರೇಂದ್ರ ಮೋದಿಗೂ, ಬಿಜೆಪಿಗೂ ಹೊಸದೇನಲ್ಲ. ಚುನಾವಣಾ ವೇದಿಕೆಯಲ್ಲಿ ನಂದನ್ ನಿಲೇಕಣಿ ಅವರನ್ನು ವೈಯಕ್ತಿಕವಾಗಿ ಅವಹೇಳನ ಮಾಡಿದ್ದನ್ನು ಪ್ರಧಾನಿ ಮರೆತಿರಬಹುದು. ಆದರೆ, ದೇಶದ ಜನ ಮರೆತಿಲ್ಲ."



■ ಬಿಕೆ ಹರಿಪ್ರಸಾದ್
ಕೆಪಿಸಿಸಿ ಅಧ್ಯಕ್ಷರು

# ಕೃಷ್ಣಾ ನದಿ ನೀರಿಗೆ ಮಹಾರಾಷ್ಟ್ರ ಕನ್ನ!

## ಹೊಸ ಯೋಜನೆ ಘೋಷಿಸಿದ ಮಹಾರಾಷ್ಟ್ರ ಸಿಎಂ ದೇವೇಂದ್ರ ಫಡ್ನವೀಸ್ । ಕರ್ನಾಟಕಕ್ಕೆ ಹರಿಯುವ ನೀರಿನ ಪ್ರಮಾಣದಲ್ಲಿ ಕೊರತೆ । ಗಡಿ ಭಾಗದ ಜನರಲ್ಲಿ ಆತಂಕ

ಮುಂಬೈ: ಕೃಷ್ಣ ನದಿ ನೀರಿಗೆ ಕನ್ನ ಹಾಕಿರುವ ಮಹಾರಾಷ್ಟ್ರ ಸರ್ಕಾರ, ಕೊಲ್ಲಾಪುರ ಜಿಲ್ಲೆಯಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ 'ರಾಧಾಕೃಷ್ಣ ನೀರಾವರಿ ಯೋಜನೆ'ಯಡಿ ಹೊಸ ಜಲಾಶಯ ನಿರ್ಮಿಸುವುದಾಗಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಘೋಷಿಸಿದ್ದಾರೆ. ಇದು ರಾಜ್ಯದ ಗಡಿ ಭಾಗದ ಜನರಲ್ಲಿ ಆತಂಕ ಮೂಡಿಸಿದೆ.

ಕೊಲ್ಹಾಪುರ ಮತ್ತು ಸಾಂಗ್ಲಿ ಜಿಲ್ಲೆಗಳಲ್ಲಿ ದೀರ್ಘಕಾಲದ ನೀರಿನ ಸಮಸ್ಯೆಯನ್ನು ಪರಿಹರಿಸಲು 3,200 ಕೋಟಿ ರೂ.ಗಳ ಪ್ರವಾಹ ನಿರ್ವಹಣೆ ಮಿಷನ್ ಅನ್ನು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಸೋಮವಾರ ಘೋಷಿಸಿದ್ದಾರೆ.

ಈ ಉಪಕ್ರಮವು ಮಳೆನೀರಿನ ಸಂಗ್ರಹವನ್ನು ಹೆಚ್ಚಿಸುವುದು ಮತ್ತು ಕೃಷ್ಣ ಹಾಗೂ ಪಂಚಗಂಗಾ ನದಿಗಳ ಸಾಮರ್ಥ್ಯವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ.

3,200 ಕೋಟಿ ವೆಚ್ಚದ ಈ ಮಿಷನ್ ಕೊಲ್ಲಾಪುರ, ಸಾಂಗ್ಲಿ ಮತ್ತು ಇಚಲಕರಂಜಿಯಲ್ಲಿ ಮಳೆನೀರಿನ ಸಂಗ್ರಹವನ್ನು ಹೆಚ್ಚಿಸುವ ಮೂಲಕ, ಕೃಷ್ಣಾ ಮತ್ತು ಪಂಚಗಂಗಾ ನದಿಗಳ ಸಾಮರ್ಥ್ಯವನ್ನು ಸುಧಾರಿಸುವ ಮತ್ತು ಮಳೆನೀರು ಒಳಚರಂಡಿ ವ್ಯವಸ್ಥೆಯನ್ನು ಬಲಪಡಿಸುವ ಮೂಲಕ ದೀರ್ಘಾವಧಿಯ ಪ್ರವಾಹ ಸ್ಥಿತಿಸ್ಥಾಪಕತ್ವದತ್ತ ಪ್ರಮುಖ ಹೆಜ್ಜೆಯಾಗಿದೆ ಎಂದು ಮಹಾರಾಷ್ಟ್ರ ಸಿಎಂ ಹೇಳಿದ್ದಾರೆ.

ಆದರೆ ಕರ್ನಾಟಕ, ಮಹಾರಾಷ್ಟ್ರ ಮತ್ತು ವಿಭಜಿತ ಆಂಧ್ರಪ್ರದೇಶದಲ್ಲಿ ಹರಿಯುವ ಕೃಷ್ಣಾ ಅಂತಾರಾಜ್ಯ ನದಿಯಾಗಿದೆ. ಕೃಷ್ಣಾ ನದಿ ನೀರು ಹಂಚಿಕೆ ಮತ್ತು ಆಲಮಟ್ಟಿ ಜಲಾಶಯ ಎತ್ತರ ಹೆಚ್ಚಳ ವಿಷಯದಲ್ಲೂ ಕ್ಯಾತೆ ತೆಗೆದಿರುವ ಮಹಾರಾಷ್ಟ್ರ, ಈಗ ಕರ್ನಾಟಕದ ಪಾಲಿನ ನದಿ ನೀರನ್ನು ಅಕ್ರಮವಾಗಿ ಬಳಸಿಕೊಳ್ಳಲು ಮುಂದಾಗಿದೆ.

ಇಂಚಲಕರಂಜಿ ನಗರದ ಪಕ್ಕದಲ್ಲೇ ದೂಧಗಂಗಾ ನದಿ ಹರಿಯುತ್ತಿದ್ದರೂ ಅಲ್ಲಿಂದ 30 ಕಿ.ಮೀ. ದೂರದ ದಾನವಾಡ ಬಳಿ ಜಾಕವೆಲ್ ನಿರ್ಮಿಸಿ 4 ಟಿಎಂಸಿ ನೀರು ಕೊಂಡೊಯ್ಯುವ ರಾಧಾಕೃಷ್ಣನೀರಾವರಿ ಯೋಜನೆಯನ್ನು ಮಹಾರಾಷ್ಟ್ರ ಮುಖ್ಯಮಂತ್ರಿ ಘೋಷಿಸಿದ್ದಾರೆ.

### ಕರ್ನಾಟಕಕ್ಕೆ ಹರಿಯುವ ನೀರಿನ ಪ್ರಮಾಣದಲ್ಲಿ ಕೊರತೆ

ಈ ಯೋಜನೆಯಿಂದ ಕೃಷ್ಣಾ ನದಿಯ ಸುಮಾರು 4 ಟಿಎಂಸಿ ನೀರನ್ನು ಮಹಾರಾಷ್ಟ್ರ ಬಳಸಿಕೊಳ್ಳಲಿದೆ. ಇದರಿಂದ ಕರ್ನಾಟಕಕ್ಕೆ ಹರಿಯುವ ನೀರಿನ ಪ್ರಮಾಣದಲ್ಲಿ ಕೊರತೆಯಾಗಲಿದ್ದು, ರಾಜ್ಯದ ಪ್ರಮುಖ ಹಿಪ್ಪರಗಿ ಬ್ಯಾರೇಜ್ ಹಾಗೂ ಆಲಮಟ್ಟಿ ಜಲಾಶಯಕ್ಕೆ ಬಂದು ಸೇರುವ ನೀರಿನ ಹರಿವು ತೀವ್ರವಾಗಿ ಕುಸಿಯಲಿದೆ. ಇದನ್ನು ಯಾವುದೇ ಕಾರಣಕ್ಕೂ ಅನುಮತಿಸದೆ ತಕ್ಷಣವೇ ತಡೆಯಬೇಕಾಗಿದೆ" ಎಂದು ಗಡಿ ಭಾಗದ ರೈತರು ಆಗ್ರಹಿಸಿದ್ದಾರೆ.



# ವಿಶೇಷಚೇತನ ಮಕ್ಕಳು ಸಮಾಜದ ಅವಿಭಾಜ್ಯ ಅಂಗ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಶೇಷಚೇತನ ಮಕ್ಕಳು ನಮ್ಮ ಸಮಾಜದ ಅವಿಭಾಜ್ಯ ಅಂಗವಾಗಿದ್ದು, ಅವರಿಗೂ ಎಲ್ಲ ಮಕ್ಕಳಂತೆ ಸಮಾನ ಶಿಕ್ಷಣ, ಸಮಾನ ಅವಕಾಶ ಹಾಗೂ ಗೌರವಯುತ ಬದುಕು ದೊರೆಯುವಂತೆ ಮಾಡುವುದು ನಮ್ಮೆಲ್ಲರ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ, ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.



ಸೋಮವಾರ ನಗರದ ಪ್ರಕೃತಿ ಕಾಲನಿಯಲ್ಲಿ ಬಿ.ಎಲ್.ಡಿ.ಇ ಸಂಸ್ಥೆ ಮತ್ತು ಸಂಭವ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಪ್ರಾರಂಭಿಸಲಾಗಿರುವ ಬಿ.ಎಲ್.ಡಿ.ಇ- ರಘುಕುಲ ಸಮನ್ವಯ ಶಾಲೆ ಉದ್ಘಾಟಿಸಿ ಅವರು ಮಾತನಾಡಿದರು.

ವಿಶೇಷಚೇತನ ಮಕ್ಕಳ ಸಬಲೀಕರಣಕ್ಕೆ ಸಮರ್ಪಕ ಹೆಜ್ಜೆಯಾಗಿ ಬಿ.ಎಲ್.ಡಿ.ಇ-ರಘುಕುಲ ಸಮನ್ವಯ ಶಾಲೆ ಪ್ರಾರಂಭಿಸಲಾಗಿದೆ. ಪ್ರತಿಯೊಂದು ವಿಶೇಷಚೇತನ ಮಗುವಿನ ಕನಸಿಗೆ ರೆಕ್ಕೆ ನೀಡಿ ಅವರಲ್ಲಿ ಆತ್ಮವಿಶ್ವಾಸ ಬೆಳೆಸುವ ಮೂಲಕ ಸಮಾಜದ ಮುಖ್ಯವಾಹಿನಿಯಲ್ಲಿ ಗೌರವದಿಂದ ಬದುಕಲು ಅವಕಾಶ ಕಲ್ಪಿಸುವ ಶಿಕ್ಷಣ ಕೇಂದ್ರವಾಗಿ ಈ ಶಾಲೆ ರೂಪುಗೊಳ್ಳಲಿದೆ.

ಇದು ರಾಷ್ಟ್ರಕ್ಕೆ ಮಾದರಿಯಾಗುವ ವಿಶ್ವಾಸವಿದೆ. ಇಲ್ಲಿರುವ ಆಧುನಿಕ ವಿಶಾಲ ಕಟ್ಟಡ, ಸಕಲ ಸೌಕರ್ಯಗಳನ್ನು ಹೊಂದಿರುವ ಕೊಠಡಿಗಳು, ಬೋಧಕ ಮತ್ತು ಆರೈಕೆ ಸಿಬ್ಬಂದಿಯ ನಿಸ್ವಾರ್ಥ ಸೇವೆ ವಿಶೇಷಚೇತನ ಮಕ್ಕಳ ಅಭಿವೃದ್ಧಿಗೆ ಪೂರಕವಾಗಿವೆ. ಎಲ್ಲೆಡೆ ಇಂಥ ಶಾಲೆಗಳು ಆರಂಭವಾಗಿ ವಿಶೇಷ ಚೇತನ ಮಕ್ಕಳ ಶ್ರೇಯೋಭಿವೃದ್ಧಿಯಾಗಬೇಕು. ನಾನು ತಿಂಗಳಿಗೆ ಒಮ್ಮೆಯಾದರೂ ಇಲ್ಲಿಗೆ ಭೇಟಿ ನೀಡುತ್ತೇನೆ ಎಂದು ಅವರು ಹೇಳಿದರು.

ಬಿ.ಎಲ್.ಡಿ.ಇ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ್ ಶಾಸಕ ಸುನಿಲಗೌಡ ಪಾಟೀಲ ಮಾತನಾಡಿ, ಬಸವ ನಾಡಿನಲ್ಲಿ ಇದು ಅಪರೂಪದ ಶಾಲೆಯಾಗಿದೆ. ವಿಶೇಷ ಚೇತನ ಮಕ್ಕಳನ್ನು ಸಾಕಿ ಸಲಹುವುದು ಮತ್ತು ಅವರಿಗೆ ಕಲಿಸುವುದು ಸವಾಲಿನ ಕೆಲಸವಾಗಿದೆ. ಅಂಥ ಮಕ್ಕಳಿಗೆ ಈ ಶಾಲೆ ಸಂಜೀವಿನಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿವಮೊಗ್ಗ ಬೆಕ್ಕಿನ ಕಲ್ಮಠದ ಡಾ. ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳು ಜಡೆ-ಸೊರಬ ಮಠದ ಶ್ರೀ ಮಹಾಂತ ಸ್ವಾಮೀಜಿ, ನಿಡೋಣಿಯ ಎರಡೆತ್ತಿನ ಮಠದ ಸಿದ್ಧಲಿಂಗ ಶ್ರೀಗಳು, ಮಾಜಿ ಶಾಸಕರಾದ ಪ್ರೊ. ರಾಜು ಆಲಗೂರ, ಸೋಮನಗೌಡ ಪಾಟೀಲ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಎಸ್. ಸಂಬಣ್ಣಿ, ಸಂಭವ ಶಿಕ್ಷಣ ಮತ್ತು ಸಾಂಸ್ಕೃತಿಕ ಸಂಸ್ಥೆಯ ನಿರ್ದೇಶಕ ರಾಜೇಂದ್ರ ರುಣವಾಲ, ಬಿ.ಎಲ್.ಡಿ.ಇ ಸಂಸ್ಥೆಯ ಮುಖ್ಯ ಸಲಹೆಗಾರ ಡಾ. ಆರ್. ವಿ. ಕುಲಕರ್ಣಿ, ಆಸ್ಪತ್ರೆಯ ವೈದ್ಯಕೀಯ ಅಧಿಕ್ಷಕ ಡಾ. ಎನ್. ಬೆಂಟೂರ, ಸಂಸ್ಥೆಯ ಆಡಳಿತಾಧಿಕಾರಿ ಐ. ಎಸ್. ಕಾಳಪ್ಪನವರ, ಮುಖಂಡರಾದ ನಿರ್ಮಲ ರುಣವಾಲ, ನರೇಂದ್ರ ಓಸ್ವಾಲ್, ಕೆಎಲ್ಇ ವಿವಿಯ ಡಾ. ಅವಿನಾಶ ಕವಿ, ಏಕನಾಥ ಜಾಧವ, ಈಶ್ವರ ಬಾಗೋಜಿ, ಸವಿತಾ ದೇಶಮುಖ, ದಾನಮ್ಮ ಮಜ್ಜಗಿ ಮುಂತಾದವರು ಉಪಸ್ಥಿತರಿದ್ದರು.

### ಉಚಿತ ಆರೋಗ್ಯ ತಪಾಸಣೆ ಶಿಬಿರ

ಉದ್ಘಾಟನೆ ಕಾರ್ಯಕ್ರಮದ ಬಳಿಕ ಬಿ. ಎಲ್. ಡಿ.ಇ ಆಸ್ಪತ್ರೆಯ ವತಿಯಿಂದ ವಿಶೇಷಚೇತನ ಮಕ್ಕಳ ಉಚಿತ ಆರೋಗ್ಯ ತಪಾಸಣೆ ಶಿಬಿರ ನಡೆಯಿತು. ಚಿಕ್ಕಮಕ್ಕಳ ತಜ್ಞರು, ಶ್ರವಣದೋಶ ವೈದ್ಯರು, ಫಿಜಿಯೋಥೆರಪಿ, ಎಲುಬು ಮತ್ತು ಕೀಲು, ಮೆಡಿಸಿನ್ ಮುಂತಾದ ವಿಭಾಗಗಳ ವೈದ್ಯರು ಮಕ್ಕಳ ಆರೋಗ್ಯ ತಪಾಸಣೆ ನಡೆಸಿದರು.

# ಗುಣಮಟ್ಟದ ಕಾಮಗಾರಿ ಕೈಗೆತ್ತಿಕೊಳ್ಳಿ : ಸಚಿವ ಎಂ.ಬಿ. ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಹಂಚಿನಾಳ ತಾಂಡಾದಲ್ಲಿ ಸುಸಜ್ಜಿತ ರಸ್ತೆ ನಿರ್ಮಿಸಿ, ಇಲ್ಲಿ ಗುಣಮಟ್ಟದ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಗುಣಮಟ್ಟದ ಕೆಲಸ ಇಲ್ಲಿ ನಡೆಯಬೇಕು ಎಂದು ಬೃಹತ್ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದಡಾ. ಎಂ.ಬಿ. ಪಾಟೀಲ ಅವರು ಸೂಚಿಸಿದರು.



ಮಹಾನಗರ ಪಾಲಿಕೆ ವಾರ್ಡ್ ನಂ. 4ರ ವ್ಯಾಪ್ತಿಯ ಹಂಚಿನಾಳ ತಾಂಡಾದಲ್ಲಿ ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ 2ನೇ ಹಂತದಲ್ಲಿ 1.50 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸೋಮವಾರ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಹಂಚಿನಾಳ ತಾಂಡದಲ್ಲಿ ಒಂದು ಕೋಟಿ ಐವತ್ತು ಲಕ್ಷ ರೂ.ಗಳ ವೆಚ್ಚದಲ್ಲಿ ಈ ಕಾಮಗಾರಿಗೆ ಇಂದು ಭೂಮಿ ಪೂಜೆ ನಡೆದಿದೆ. ಆದರೆ ಈ ಕಾಮಗಾರಿಗೆ ಅನುದಾನದ ಕೊರತೆಯಾದರು ಅನುದಾನ ಒದಗಿಸಲಾಗುವುದು. ಆದರೆ ತಾಂಡಾ ಜನತೆಯ ಆಸೆಯಂತೆ ಗುಣಮಟ್ಟದ ಕೆಲಸ ನಿರ್ವಹಿಸಬೇಕು.

ಅನೇಕ ವರ್ಷಗಳಿಂದ ಹಂಚಿನಾಳ ತಾಂಡಾ-1 ಮತ್ತು 2ರಸ್ತೆ ಅಭಿವೃದ್ಧಿಯಾಗಿ ಇಲ್ಲಿನ ನಿವಾಸಿಗಳಿಗೆ ಇದರಿಂದ ಅನುಕೂಲವಾಗಲಿದೆ. ತಾಂಡಾ ಜನತೆಯ ಸಹನೆ ಹಾಗೂ ತಾಳ್ಮೆ ಮೆಚ್ಚುವಂಥದ್ದಾಗಿದೆ. ಉತ್ತಮ ರಸ್ತೆ ಇಲ್ಲಿ ನಿರ್ಮಾಣವಾಗಲಿದೆ ಎಂದರು.

ಜೊತೆಗೆ ಹಂಚಿನಾಳ ಕೆರೆ ಅಭಿವೃದ್ಧಿಗೆ 10 ಕೋಟಿ ರೂ. ಒದಗಿಸಲಾಗಿದೆ. ಈ ಮೊತ್ತದಲ್ಲಿ 61 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಕಾಮಗಾರಿಗಳಲ್ಲಿ ಮಳೆ ನೀರು ಚರಂಡಿ, ಒಳಚರಂಡಿ ಜಾಲ, ಯುಟಿಲಿಟಿ ಡಕ್ಟ್ ಸೇರಿದಂತೆ ರಸ್ತೆ ಅಭಿವೃದ್ಧಿ ಕಾಮಗಾರಿಗಳಿವೆ. ಒಟ್ಟಾರೆ ನಗರದ ಮೂಲಸೌಕರ್ಯವನ್ನು ಬಲಪಡಿಸುವುದು, ಮಳೆಗಾಲದಲ್ಲಿ ಉಂಟಾಗುವ ಪ್ರವಾಹ ಸಮಸ್ಯೆಯನ್ನು ತಗ್ಗಿಸುವುದು ಹಾಗೂ ನಾಗರಿಕರಿಗೆ ಉತ್ತಮ ನಾಗರಿಕ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಈ ಕಾಮಗಾರಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಈ ಭಾಗದಲ್ಲಿ ಅಂತರ್ಜಲ ಬಹಳಷ್ಟು ಕುಸಿದಿತ್ತು. ಕೆರೆಯಲ್ಲಿ ಕಲುಷಿತ ನೀರು ಹರಿಯುತ್ತಿತ್ತು. ಈಗ ಕೆರೆ ಅಭಿವೃದ್ಧಿಗೆ ಅನುದಾನ ಒದಗಿಸಲಾಗಿದೆ. ಈಗ ಕೆರೆಯಲ್ಲಿ ಕಲುಷಿತ ನೀರು ಬರುವುದಿಲ್ಲ. ಬದಲಿಗೆ ಅಂತರ್ಜಲ ಹೆಚ್ಚಳದಿಂದಾಗಿ ನಿಮ್ಮ ಬೋರ್ ವೆಲ್ ಹಾಗೂ ಬಾವಿಗಳಿಗೆ ಮರುಪೂರಣಗೊಳ್ಳಲಿವೆ.

ಈ ತಾಂಡದಲ್ಲಿ ಸಿಸಿ ರಸ್ತೆಗೆ 40ಲಕ್ಷ ರೂ. ಒದಗಿಸಲಾಗಿದೆ, ಕೆರೆ ಅಭಿವೃದ್ಧಿಯಾಗುತ್ತಿದ್ದಂತೆಯೇ ವಾಯು-ವಿಹಾರಕ್ಕೆ ವ್ಯವಸ್ಥೆ ಮಾಡಿಕೊಡಲಾಗುವುದು. ಜೊತೆಗೆ ಟೊಯೊಟಾ ಕಂಪನಿಯ ಸಿಎಸ್ಆರ್ ಅನುದಾನದಡಿ 25 ಲಕ್ಷ ರೂ. ಹೈಟೆಕ್ ಜಿಮ್ ಹಾಕಿಕೊಡುವುದಾಗಿ ಸಚಿವರು ಇದೇ ವೇಳೆ ಘೋಷಿಸಿದರು.

ಕಾರ್ಯಕ್ರಮದಲ್ಲಿ ಮೇಯರ್ ಎಂ. ಎಸ್. ಕರಡಿ, ಸದಸ್ಯರಾದ ಚವ್ಹಾಣ, ಆಯುಕ್ತರಾದ ವಿಜಯಕುಮಾರ ಮೆಕ್ಕಳಕಿ, ಪಾಲಿಕೆಯ ಸೂಪರಿಂಡೆಂಟ್ ಎಂಜಿನೀಯರ್ ತಿಮ್ಮಪ್ಪ, ದಿಲೀಪ ರಾಠೋಡ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

# ಸಿಂದಗಿಯಲ್ಲಿ ಶೀಘ್ರ ಕಾನಿಪ ಸಂಘಕ್ಕೆ ಪತ್ರಿಕಾ ಭವನ ನಿರ್ಮಾಣ

## ಸಿಂದಗಿಯಲ್ಲಿ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಸಕ ಅಶೋಕ ಮನಗೂಳಿ ಭರವಸೆ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ತಾಲೂಕು ಪತ್ರಕರ್ತರಿಗೆ ಬಹುಕಾಲದ ಬೇಡಿಕೆಯಾಗಿರುವ ಪತ್ರಕರ್ತರ ಭವನವನ್ನು ಅತೀ ಶೀಘ್ರದಲ್ಲಿಯೇ ನಿರ್ಮಿಸಿಕೊಡಲಾಗುವುದು ಎಂದು ಶಾಸಕ ಅಶೋಕ ಮನಗೂಳಿ ಭರವಸೆ ನೀಡಿದರು.

ನಗರದ ಶ್ರೀ ಪದ್ಮರಾಜ ಶಿಕ್ಷಣ ಮಹಾವಿದ್ಯಾಲಯದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ರಿ), ಸಿಂದಗಿ ತಾಲೂಕು ಘಟಕದ ವತಿಯಿಂದ ಆಯೋಜಿಸಿದ್ದ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾದ ಮಾಧ್ಯಮದ ಸ್ವಾತಂತ್ರ್ಯ ಹಾಗೂ ಜವಾಬ್ದಾರಿಯನ್ನು ಸ್ಮರಿಸುವ ದಿನವೇ ಪತ್ರಿಕಾ ದಿನಾಚರಣೆ. ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸುವ ಪತ್ರಕರ್ತರು ಮತ್ತು ವಿವಿಧ ಕ್ಷೇತ್ರಗಳ ಸಾಧಕರನ್ನು ಗುರುತಿಸಿ ಗೌರವಿಸುವುದು, ಪತ್ರಿಕೋದ್ಯಮದ ಮೌಲ್ಯಗಳು, ನೈತಿಕತೆ ಹಾಗೂ ಇಂದಿನ ಸವಾಲುಗಳ ಕುರಿತು ಚರ್ಚೆ ನಡೆಸುವುದು ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಹಕ್ಕನ್ನು ಎತ್ತಿಹಿಡಿಯುವುದು ಪತ್ರಿಕಾ ದಿನಾಚರಣೆಯ ಉದ್ದೇಶವಾಗಿದೆ. ಅನ್ಯಾಯಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಮಾಧ್ಯಮಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಗಟ್ಟಿಗೊಳಿಸುವಲ್ಲಿ ಪತ್ರಕರ್ತರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.



ಈ ವೇಳೆ ತಾಲೂಕು ದಂಡಾಧಿಕಾರಿ ಕರೆಪ್ಪ ಬೆಳ್ಳಿ ಮಾತನಾಡಿ, ಪತ್ರಕರ್ತರು ಸಮಾಜಮುಖಿ ಕಾರ್ಯಗಳ ಮೂಲಕ ದೇಶದ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ. ವಿವಿಧ ಇಲಾಖೆಗಳ ಕಳಪೆ ಕಾಮಗಾರಿಗಳು ಹಾಗೂ ಸಾರ್ವಜನಿಕರ ಕುಂದುಕೊರತೆಗಳನ್ನು ಸುದ್ದಿಗಳ ಮೂಲಕ ಬೆಳಕಿಗೆ ತಂದು ಅಧಿಕಾರಿಗಳನ್ನು ಎಚ್ಚರಿಸುವ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಕಾನಿಪ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ ಮಾತನಾಡಿ, ಪತ್ರಕರ್ತರು ಸಾಕಷ್ಟು ಸೌಲಭ್ಯಗಳ ಕೊರತೆಯ ನಡುವೆಯೂ ಸಮಾಜದ ಪರವಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಜನರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವ ಕೆಲಸವನ್ನು ನಿರಂತರವಾಗಿ ಮಾಡುತ್ತಿದ್ದಾರೆ. ಆದ್ದರಿಂದ ಸಿಂದಗಿಯಲ್ಲಿ ಪತ್ರಕರ್ತರ ಭವನ ನಿರ್ಮಾಣಕ್ಕೆ ಶಾಸಕ ಅಶೋಕ ಮನಗೂಳಿ ಅವರು ವಿಶೇಷ ಆದ್ಯತೆ ನೀಡಿ ಶೀಘ್ರ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಿಂದಗಿ ತಾಲೂಕು ಘಟಕದ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಜಿಲ್ಲಾ ಪ್ರಧಾನ ಕಾಯದರ್ಶಿ ಇಂದುಶೇಖರ್ ಮಣೂರ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಂಘದ ತಾಲೂಕಾಧ್ಯಕ್ಷ ಮಹಾಂತೇಶ ನೂಲಾನವರ ಮಾತನಾಡಿದರು. ಕಾರ್ಯಕ್ರಮದಲ್ಲಿ ತಾಲೂಕಿನ ಎಲ್ಲಾ ಪತ್ರಕರ್ತರನ್ನು ಹಾಗೂ ಪತ್ರಿಕಾ ವಿತರಕರನ್ನು ಸನ್ಮಾನಿಸಲಾಯಿತು. ಯಂಕಂಚಿ ಹಿರೇಮಠದ ಅಭಿನವ ರುದ್ರಮುನಿ ಶಿವಾಚಾರ್ಯರು ಆಶೀರ್ವಚನ ನೀಡಿದರು. ರಾಂಪೂರ ಆರೂಢ ಮಠದ ನಿತ್ಯಾನಂದ ಮಹಾರಾಜರು ಸಮ್ಮುಖ ವಹಿಸಿದ್ದರು. ವೇದಿಕೆಯ ಮೇಲೆ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಪ್ರಕಾಶ್ ಬೆಣ್ಣೂರ, ಪ್ರಾಚಾರ್ಯೆ ಡಾ.ಜೆ.ಸಿ.ನಂದಿಕೊಲ, ಬಿಇಒ ಟಿ.ಎಸ್.ಆಲಗೂರ, ಸಿಪಿಐ ಸುನೀಲ ಮೂಲಿಮನಿ ಇದ್ದರು.

ಕಾರ್ಯಕ್ರಮವನ್ನು ಪ್ರಶಿಕ್ಷಣಾರ್ಥಿನಿ ಚಾಂದನಿ ಮುಲ್ಲಾ ನಿರೂಪಿಸಿದರು. ಪತ್ರಕರ್ತರಾದ ಗುರುರಾಜ ಮಠ ಸ್ವಾಗತಿಸಿದರು. ಶಿವಾನಂದ ಆಲಮೇಲ ಪ್ರಾಸ್ತಾವಿಕ ಮಾತನಾಡಿದರು. ಪ್ರ.ಕಾರ್ಯದರ್ಶಿ ಇಸ್ಮಾಯಿಲ್ ಶೇಖ ವಂದಿಸಿದರು. ಸಮಾರಂಭದಲ್ಲಿ ಎಂ.ಎಂ. ಹಂಗರಗಿ, ವಿ.ಬಿ.ಕುರಡಿ, ರಾಜಶೇಖರ ಕೂಚಬಾಳ, ಕಸಾಪ ತಾಲೂಕಾಧ್ಯಕ್ಷ ವಾಯ್.ಸಿ.ಮಯೂರ, ಎಇಇ ತಾರಾನಾಥ ರಾಠೋಡ, ಶಿವಕುಮಾರ ಸಬರದ, ಬಸವರಾಜ ರಂಜುಣಗಿ, ಏಕನಾಥ ದ್ವಾಶ್ಯಾಳ, ಸಂಗನಗೌಡ ಪಾಟೀಲ ಅಗಸಬಾಳ, ರಜತ್ ತಾಂಬೆ, ರಾಮು ಮೋರಟಗಿ, ಪ್ರಶಾಂತ ಕದ್ದರಕಿ, ಶಂಕರಗೌಡ ಬಿರಾದಾರ, ರವಿ ನಾಗಠಾಣ, ಶಾಂತು ರಾಣಾಗೋಳ, ಅನುಸುಬಾಯಿ ಪಾರಗೊಂಡ, ಸುನಂದಾ ಯಂಪುರೆ, ಮಹಾನಂದ ಬಮ್ಮಣ್ಣಿ, ಸೈನಾಬಿ ಮಸಳಿ, ಎಂ.ಎ.ಖತೀಬ, ಸಿದ್ದಲಿಂಗ ಕಿಣಗಿ, ನಿಂಗರಾಜ ಅತನೂರ, ರಜತ್ ತಾಂಬೆ, ರಾಮು ಮೋರಟಗಿ, ಪ್ರಶಾಂತ ಕದ್ದರಕಿ, ಶಂಕರಗೌಡ ಬಿರಾದಾರ, ರವಿ ನಾಗಠಾಣ, ಶಾಂತು ರಾಣಾಗೋಳ, ಅನುಸುಬಾಯಿ ಪಾರಗೊಂಡ, ಸುನಂದಾ ಯಂಪುರೆ, ಮಹಾನಂದ ಬಮ್ಮಣ್ಣಿ, ರಶ್ಮೀ ನೂಲಾನವರ, ಸೈನಾಬಿ ಮಸಳಿ, ಅಂಬರೀಷ ಸುಣಗಾರ, ಸುದರ್ಶನ ಜಂಗಣ್ಣಿ, ಪುಟ್ಟು ದೇಸಾಯಿ, ಸಿದ್ದು ಕಡಗಂಜಿ, ನವೀನ ಶೆಳ್ಳಗಿ, ವಿಜಯಕುಮಾರ ಪತ್ತಾರ, ರಣಜಿತಸಿಂಗ್ ರಜಪೂತ, ಯಲ್ಲಾಲಿಂಗ ಮಳ್ಳಿ, ಭೀಮರಾಯ ಕೆಂಭಾವಿ, ವಿನಯಕುಮಾರ ಅಗಸರ, ಈರಣ್ಣ ವಿಶ್ವಕರ್ಮ, ಪಂಡಿತ ಯಂಪುರೆ, ಖಾಜಾಅಮೀನಮಕಾಂದಾರ, ವಸಿಂಗೋಗಿ, ಶಾಂತು ಹಿರೇಮಠ, ಚಂದ್ರಕಾಂತ ಮುಚ್ಚಂಡಿ, ನಿಂಗಣ್ಣ ಯಾಳಗಿ, ಆರೀಫ್ ಅಂತರಗಂಗಿ, ಜಾಹಿರ್‌ಅಬ್ಬಾಸ್ ಮುಲ್ಲಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಪತ್ರಕರ್ತರು, ಸಾರ್ವಜನಿಕರು ಹಾಗೂ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.



"ಪದಾಧಿಕಾರಿಗಳು ಹಾಗೂ ಸದಸ್ಯರು ಕ್ರಿಯಾಶೀಲರಾಗಿದ್ದರೆ ಮಾತ್ರ ಆ ಸಂಘವು ಬಲಿಷ್ಠವಾಗಲು ಸಾಧ್ಯ. ಕಾರಣ ಕಾನಿಪ ಸಂಘದ ನೂತನ ಪದಾಧಿಕಾರಿಗಳು ಸದಸ್ಯರಿಗೆ ರಚನಾತ್ಮಕ ಕಾರ್ಯಕ್ರಮಗಳನ್ನು ಆರೋಜಿಸುವ ಮೂಲಕ ಸಿಂದಗಿ ಘಟಕವನ್ನು ಜಿಲ್ಲೆಯಲ್ಲಿಯೇ ಮಾದರಿ ಘಟಕವನ್ನಾಗಿ ರೂಪಿಸಬೇಕು."

ಇಂದುಶೇಖರ ಮಣೂರ
■ ಜಿಲ್ಲಾ ಪ್ರಧಾನ ಕಾರ್ಯದರ್ಶಿ
ಕಾರ್ಯನಿರತ ಪತ್ರಕರ್ತರ ಸಂಘ, ವಿಜಯಪುರ

# ಪ್ರಖರ ವೈಚಾರಿಕ ಬರಹಗಾರ ಲಿಂಗಣ್ಣ ಸತ್ಯಂಪೇಟೆ

ಕಲಬುರಗಿ: 'ಶಾಲಾ ಶಿಕ್ಷಕರಾಗಿ, ಪತ್ರಕರ್ತರಾಗಿ ದಿಟ್ಟತನದಿಂದ ರಾಜಕಾರಣಿಗಳ ಅಕ್ರಮಗಳು, ರೈತರ ಬವಣೆಗಳ ಬಗ್ಗೆ ಪತ್ರಿಕೆಗಳಲ್ಲಿ ಬರೆಯುತ್ತಿದ್ದ ದಿ.ಲಿಂಗಣ್ಣ ಸತ್ಯಂಪೇಟೆ ಅವರಿಗೆ ಸಾಕಷ್ಟು ಕಿರುಕುಳ ನೀಡಿದರೂ ವಿಚಲಿತರಾಗಿರಲಿಲ್ಲ' ಎಂದು ಮಾಜಿ ಸಚಿವ ಎಸ್.ಕೆ.ಕಾಂತಾ ತಮ್ಮ ಹಳೆಯ ನೆನಪುಗಳನ್ನು ಹಂಚಿಕೊಂಡರು.

ಶರಣಮಾರ್ಗ ಚಾರಿಟಬಲ್ ಟ್ರಸ್ಟ್ ವತಿಯಿಂದ ನಗರದಲ್ಲಿ ಶನಿವಾರ ಆಯೋಜಿಸಿದ್ದ ಲಿಂಗಣ್ಣ ಸತ್ಯಂಪೇಟೆಯವರ 14ನೇ ಸಂಸ್ಮರಣೆ, ಬಸವಮಾರ್ಗ ಪ್ರಶಸ್ತಿ ಪ್ರದಾನ ಹಾಗೂ 'ಅಪ್ಪನ ಒಡನಾಟ' ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಅವರ ಹೆಂಡತಿ, ಮಕ್ಕಳನ್ನು ಬಿಟ್ಟರೆ ಲಿಂಗಣ್ಣ ಅವರಿಗೆ ಅತಿ ಹತ್ತಿರವಾಗಿದ್ದು ನಾನೇ. ಶಾಲಾ ಶಿಕ್ಷಕರಾಗಿದ್ದ ಅವರು ನಿರ್ಭೀತಿಯಿಂದ ಲಂಕೇಶ್ ಪತ್ರಿಕೆಯಲ್ಲಿ ಬರೆಯುತ್ತಿದ್ದರು. ಕೆಲ ವರದಿಗಳಿಗೆ ಸಂಬಂಧಿಸಿದಂತೆ ಪಿ.ಲಂಕೇಶ್ ಅವರನ್ನೂ ಎದುರು ಹಾಕಿಕೊಂಡಿದ್ದರು.



ಅವರ ವೈಚಾರಿಕತೆ ಹಾಗೂ ಪ್ರಖರ ಬರವಣಿಗೆಯಿಂದಾಗಿ ಹಲವು ಬಾರಿ ವರ್ಗಾವಣೆ ಶಿಕ್ಷೆಗೆ ಗುರಿಯಾಗಿದ್ದರು. ಸೇವೆಯಿಂದ ಅಮಾನತುಗೊಂಡಿದ್ದರು. ಅಂತಹ ಸಂದರ್ಭದಲ್ಲಿ ಅವರ ವರ್ಗಾವಣೆ, ಅಮಾನತು ಆದೇಶವನ್ನು ವಾಪಸ್ ಪಡೆಯುವಂತೆ ಮಾಡಿದ್ದೆ' ಎಂದರು.

ಶ್ರಮಜೀವಿಗಳು, ರೈತರು ಕಷ್ಟದಲ್ಲೇ ಇರುತ್ತಾರೆ. ಗಂಟೆ ಹೊಡೆಯುವವರು, ಮಂತ್ರ ಹೇಳುವವರು ಸುಖವಾಗಿಯೇ ಇರುತ್ತಾರೆ. ರೈತರಿಗೆ ಸವಲತ್ತು ನೀಡದ ಸರ್ಕಾರ ಸಿಮೆಂಟ್ ಕಾರ್ಖಾನೆಗಳ ಉದ್ಯಮಿಗಳಿಗೆ ಶೇ 70ರಷ್ಟು ಸಬ್ಸಿಡಿಯಲ್ಲಿ ಸಾಲ ಮಂಜೂರು ಮಾಡುತ್ತದೆ. ಇದು ಯಾವ ನ್ಯಾಯ ಎಂದು ಕಾರ್ಮಿಕ ಸಚಿವರೂ ಆಗಿದ್ದ ಎಸ್.ಕೆ.ಕಾಂತಾ ಬೇಸರ ವ್ಯಕ್ತಪಡಿಸಿದರು.

ಶಾಸಕ ಬಿ.ಆರ್.ಪಾಟೀಲ ಮಾತನಾಡಿ, ಬಸವ ತತ್ವ ಅನುಯಾಯಿಯಾಗಿದ್ದ ಲಿಂಗಣ್ಣ ಸತ್ಯಂಪೇಟೆ ಅವರು ಅಣುಬಾಂಬಿನಂತಿದ್ದರು. ಅನ್ಯಾಯದ ವಿರುದ್ಧ ಸಿಡಿದೇಳುತ್ತಿದ್ದರು. ಈ ಭಾಗದ ರಾಜಕಾರಣಿಗಳು, ಮಠಾಧೀಶರ ಅಕ್ರಮಗಳನ್ನು ನಿರ್ಭಿಡೆಯಿಂದ ಬಯಲುಗೊಳಿಸುತ್ತಿದ್ದರು ಎಂದರು.

ಲಿಂಗಣ್ಣ ಅವರ ಪುತ್ರ ವಿಶ್ವಾರಾಧ್ಯ ಸತ್ಯಂಪೇಟೆ ಮಾತನಾಡಿ, 'ತಂದೆಯವರು ಆರಂಭಿಸಿದ್ದ ಬಸವ ಮಾರ್ಗ ಪತ್ರಿಕೆ ಒಂದು ಕಾಲಕ್ಕೆ 25 ಸಾವಿರ ಪ್ರತಿ ಮಾರಾಟವಾಗುತ್ತಿತ್ತು. ಚಂದಾ ಕೊಡಲಿ, ಬಿಡಲಿ ಯಾರಾದರೂ ಪರಿಚಯವಾದರೆ ಸಾಕು ಅವರ ಮನೆಗೆ ಪತ್ರಿಕೆ ಕಳಿಸುತ್ತಿದ್ದರು. ಲಾಭ ನಷ್ಟದ ಲೆಕ್ಕಾಚಾರ ಮಾಡುತ್ತಿರಲಿಲ್ಲ. ಪತ್ರಿಕೆ ಅಚ್ಚಿಗೆ ಹೋಗುವವರೆಗೂ ಕೆಲ ತಿದ್ದುಪಡಿಗಳನ್ನು ಮಾಡುತ್ತಲೇ ಇರುತ್ತಿದ್ದರು' ಎಂದರು.

ಸಾನ್ನಿಧ್ಯ ವಹಿಸಿದ್ದ ಮುದಗಲ್ ಕಲ್ಯಾಣಾಶ್ರಮದ ಮಹಾಂತ ಸ್ವಾಮೀಜಿ ಮಾತನಾಡಿ, 'ಲಿಂಗಣ್ಣ ಅವರು ಇಳಕಲ್ ಮಹಾಂತಅಪ್ಪಗಳ ಅನುಯಾಯಿಯಾಗಿದ್ದರು. ಹಲವು ಬಾರಿ ಇಳಕಗೆ ಬಂದಾಗ ಅವರೊಂದಿಗೇ ನಾನೇ ಇರುತ್ತಿದ್ದೆ. ಇಳಕಲ್ ಶ್ರೀಗಳು ಸತ್ಯಂಪೇಟೆವರೆಗೆ ಎರಡು ಬಾರಿ ಪಾದಯಾತ್ರೆ ಮಾಡಿದ್ದರು. ಹಾದಿಯಲ್ಲಿ ಶರಣತತ್ವದ ಬಗ್ಗೆ ಪ್ರಚಾರ ಮಾಡಿದ್ದರು. ಸಿಂಧನೂರು ಕಡೆ ಲಿಂಗಣ್ಣ ಅವರು ಬಂದಾಗ ಕಂಡ ಬಸ್ ಹತ್ತಿ ಆ ಊರಿಗೆ ಹೋಗಿ ಜನರನ್ನು ಭೇಟಿ ಮಾಡುತ್ತಿದ್ದೆವು. ಬೈಕ್‌ನಲ್ಲಿಯೂ ಹಲವು ಬಾರಿ ಗ್ರಾಮಗಳಿಗೆ ಸಂಚರಿಸಿದ್ದೇವೆ. ಲಿಂಗಣ್ಣ ಅವರು ನಿಜವಾದ ಶರಣ' ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಬೆಂಗಳೂರಿನ ಸಿಸಿಬಿ ಪೊಲೀಸ್ ಅಧಿಕಾರಿ ಡಾ.ಬಿ.ಎಸ್.ಸುಧಾಕರ್ ಅವರಿಗೆ ರಾಜ್ಯಮಟ್ಟದ ಬಸವ ಮಾರ್ಗ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ನೀಟ್ ಅಕ್ರಮ ಖಂಡಿಸಿ ವಿದ್ಯಾರ್ಥಿಗಳ ಪ್ರತಿಭಟನೆ

ಕಲಬುರಗಿ: ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್) ಪ್ರಶ್ನೆ ಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳು ಹಾಗೂ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ನಡೆಯುತ್ತಿರುವ ಚೆಲ್ಲಾಟವನ್ನು ಖಂಡಿಸಿ ಕಲಬುರಗಿಯಲ್ಲಿ ಶನಿವಾರ ನೂರಾರು ವಿದ್ಯಾರ್ಥಿಗಳು ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು.

'ಗುಲ್ಬರ್ಗಾ ಸ್ಟೂಡೆಂಟ್ಸ್ ಮೂಮೆಂಟ್' ಹಾಗೂ 'ಸ್ಟೂಡೆಂಟ್ಸ್ ರೆವಲ್ಯೂಷನ್ ಯುವ ಶಕ್ತಿ' ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಪ್ರತಿಭಟನೆಗೆ ಕಾಂಗ್ರೆಸ್ ಯುವ ಮುಖಂಡ ಫರಾಜ್ ಉಲ್ ಇಸ್ಲಾಂ ನೇತೃತ್ವ ವಹಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಫರಾಜ್ ಉಲ್ ಇಸ್ಲಾಂ,ಪರೀಕ್ಷಾ ವ್ಯವಸ್ಥೆಯ ವೈಫಲ್ಯದಿಂದ ಲಕ್ಷಾಂತರ ವಿದ್ಯಾರ್ಥಿಗಳು ಹಾಗೂ ಅವರ ಪೊಷಕರು ಸಂಕಷ್ಟ ಅನುಭವಿಸುತ್ತಿದ್ದಾರೆ.

ವಿದ್ಯಾರ್ಥಿಗಳ ಹೋರಾಟದಿಂದ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೆಚ್ಚಾಗಿದೆ. ಆದರೆ ರಾಜೀನಾಮೆ ಮಾತ್ರ ಪರಿಹಾರವಲ್ಲ. ಪರೀಕ್ಷಾ ಅಕ್ರಮಗಳಿಗೆ ಶಾಶ್ವತ ಅಂತ್ಯ ಕಂಡು, ವಿದ್ಯಾರ್ಥಿಗಳಿಗೆ ನ್ಯಾಯ ದೊರೆಯುವವರೆಗೆ ನಮ್ಮ ಹೋರಾಟ ಮುಂದುವರಿಯಲಿದೆ ಎಂದು ಹೇಳಿದರು.

ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾಗಿರುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಹಾಗೂ ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕಠಿಣ ಕಾನೂನು ಜಾರಿಗೆ ತರಬೇಕೆಂದು ಅವರು ಒತ್ತಾಯಿಸಿದರು

ಸಂಜೆ 4 ಗಂಟೆಗೆ ಮಹಾನಗರ ಪಾಲಿಕೆ ಟೌನಹಾಲ್‌ನಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಜಗತ್ ವೃತ್ತದವರೆಗೆ ಸಾಗಿತು. ಮೆರವಣಿಗೆಯುದ್ದಕ್ಕೂ ಪ್ರತಿಭಟನಾಕಾರರು ಕೇಂದ್ರ ಸರ್ಕಾರ ಹಾಗೂ ಪರೀಕ್ಷಾ ವ್ಯವಸ್ಥೆಯ ವೈಫಲ್ಯದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ನೂರಾರು ಕಾಲೇಜು ವಿದ್ಯಾರ್ಥಿಗಳು, ಯುವಜನರು ಹಾಗೂ ವಿವಿಧ ವಿದ್ಯಾರ್ಥಿ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ವಿದ್ಯಾರ್ಥಿಗಳಿಗೆ ನ್ಯಾಯ ಕಲ್ಪಿಸುವಂತೆ ಆಗ್ರಹಿಸಿದರು.

# ಯುವಕರು ಸೈನಿಕರಂತೆ ದೇಶ ಸೇವೆ ಮಾಡಲಿ



ಕಲಬುರಗಿ: ವಿದ್ಯಾರ್ಥಿಗಳು ತಮಗಿಷ್ಟವಾದ ಯಾವುದೇ ಕೋರ್ಸ್ ಅಧ್ಯಯನ ಮಾಡಿಕೊಂಡು, ವಿವಿಧ ಕ್ಷೇತ್ರದಲ್ಲಿ ಕೆಲಸ ಮಾಡಿ. ಆದರೆ ದೇಶ ಸೇವೆ, ಭಕ್ತಿ, ರಕ್ಷಣೆ ಎಂಬುದು ಕೇವಲ ಸೈನಿಕರಿಗೆ ಮಾತ್ರ ಸೀಮಿತವಲ್ಲ. ಜೊತೆಗೆ ದೇಶದ ಪ್ರತಿಯೊಬ್ಬರಲ್ಲಿ ಅದರಲ್ಲಿ ವಿಶೇಷವಾಗಿ ಯುವಕರು ಸೈನಿಕರಂತೆ ದೇಶದ ರಕ್ಷಣೆ, ಒಳಿತಿಗಾಗಿ ಸೇವೆ ಸಲ್ಲಿಸುವುದು ಅಗತ್ಯವಾಗಿದೆ ಎಂದು ಕಾರ್ಗಿಲ್ ಯೋಧ ಶಿವಶರಣಪ್ಪ ಎಸ್.ತಾವರಖೇಡ್ ಯುವಕರಿಗೆ ಸಲಹೆ ನೀಡಿದರು. ನಗರದ ಗಂಗಾ ನಗರದಲ್ಲಿನ 'ವಿವೇಕಾನಂದ ಪ್ರೌಢಶಾಲೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಭಾನುವಾರ ಜರುಗಿದ '27ನೇ ಕಾರ್ಗಿಲ್ ವಿಜಯ ದಿವಸ್'ದಲ್ಲಿ ಸತ್ಕಾರ ಸ್ವೀಕರಿಸಿ, ಅವರು ಮಾತನಾಡುತ್ತಿದ್ದರು.

ಪಾಕಿಸ್ತಾನದ ಸೈನಿಕರು ನಮ್ಮ ದೇಶದ ಕಾರ್ಗಿಲ್ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಮಲ್ಲಿಕಾರ್ಜುನ ಗುಡಬಾ, ಶಿಕ್ಷಕಿಯರಾದ ಅರ್ಚನಾ, ಶಶಿಕಲಾ, ಸುನಂದಾ, ಪ್ರದೇಶದೊಳಗೆ ನುಸುಳಿರುವ ವಿಷಯ ತಿಳಿದ ನಮ್ಮ ಸೈನಿಕರು ಅಲ್ಲಿಗೆ ತೆರಳಿದಾಗ ಅವರು ನಮ್ಮ ಮೇಲೆ ದಾಳಿ ಮಾಡಿ ಹತ್ಯೆಗೊಳಿಸಿದರು. ಇದರಿಂದ ನಮ್ಮ ಎಲ್ಲಾ ಸೈನಿಕರು ಪಾಕಿಸ್ತಾನದ ಸೈನಿಕರೊಂದಿಗೆ ಮೇ-5,1999 ರಿಂದ ಜು.26,1999ರ ವರೆಗೆ ನಿರಂತರವಾಗಿ ಯುದ್ಧ ಮಾಡಿ, ಕೊನೆಗೆ ವಿಜಯದ ಪತಾಕೆಯನ್ನು ಹಾರಿಸಿದರು. ಈ ಯುದ್ಧದಲ್ಲಿ ಭಾಗವಹಿಸಿದ್ದ ನನ್ನ ದೇಹದ ಕಣ್ಣಿನ ಬಳಿ ಗುಂಡು ತಗಲಿದರು ಕೂಡಾ ನನಗೆ ನನ್ನ ದೇಹಕ್ಕಿಂತ ದೇಶ ಮುಖ್ಯ ಎಂದು ಸೇವೆ ಮಾಡಿದ್ದೇನೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಉಪನ್ಯಾಸಕ ಎಚ್.ಬಿ.ಪಾಟೀಲ್, ಹಿಮಾವೃತ ಪ್ರದೇಶ, ವಿಪರಿತ ಚಳಿ, ಅತ್ಯಂತ ಕಷ್ಟದ ಪರಿಸ್ಥಿತಿಯಲ್ಲಿಯೂ ಜೀವದ ಹಂಗನ್ನು ತೊರೆದು, ತಮ್ಮ ಕುಟುಂಬದ ಬಗ್ಗೆ ಚಿಂತಿಸದೆ, ಹಗಲು-ರಾತ್ರಿಯೆನ್ನದೇ ದೇಶದ ರಕ್ಷಣೆಗೆ ಸದಾ ಕಂಕಣಬದ್ಧವಾಗಿ ಅಮೂಲ್ಯವಾದ ಸೇವೆಯನ್ನು ಸಲ್ಲಿಸುವ ಸೈನಿಕರಿಗೆ ದೇಶವೇ ತಮ್ಮ ಪರಿವಾರವೆಂಬ ಭಾವನೆಯಿರುತ್ತದೆ. ಸೈನಿಕರ ಬಗ್ಗೆ ಗೌರವವಿರಲಿ. ಭಾರತೀಯರ ಸೈನಿಕರು ವಿಶ್ವದಲ್ಲಿಯೇ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಅವರ ಸೇವೆ ಅನನ್ಯ. ಸೈನಿಕ ವೃತ್ತಿಯ ಬಗ್ಗೆ ನಿರ್ಲಕ್ಷ್ಯ ವಹಿಸದೇ, ಯುವಕರು ದೇಶಸೇವೆ ಸಲ್ಲಿಸಲು ಸಿದ್ಧರಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಪ್ರೌಢಶಾಲೆಯ ಮುಖ್ಯ ಶಿಕ್ಷಕ ಮಲ್ಲಿಕಾರ್ಜುನ ಗುಡಬಾ, ಅರ್ಚನಾ, ಶಶಿಕಲಾ, ಸುನಂದಾ, ಪಲ್ಲವಿ, ಸೋನಿಯಾ, ಅಕ್ಷತಾ, ಪ್ರಾಥಮಿಕ ಶಾಲೆಯ ಶಿಕ್ಷಕಿ ಕಾವೇರಿ ಹೂನಳ್ಳಿ, ಶಿಕ್ಷಕಿಯರಾದ ವಿಶಾಲಾಕ್ಷಿ, ಸಿದ್ದಮ್ಮ, ಮೀನಾಕ್ಷಿ, ಶೃತಿ, ಪ್ರತಿಭಾ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಲೈಫ್ ಸರ್ಟಿಫಿಕೇಟ್ ಸ್ವಯಂ ಸಾಧನೆಯಿಂದಷ್ಟೇ ಸಾಧ್ಯ



ಕಲಬುರಗಿ: ಸಮಾಜದಲ್ಲಿ ಜನನ ಮತ್ತು ಮರಣ ಪ್ರಮಾಣ ಪತ್ರಗಳನ್ನು ಸುಲಭವಾಗಿ ಪಡೆಯಬಹುದು. ಆದರೆ ಬದುಕಿಗೆ ಸಾರ್ಥಕತೆ ನೀಡುವ ಲೈಫ್ ಸರ್ಟಿಫಿಕೇಟ್ ಕೊಡುವ ಯಾವುದೇ ಕೇಂದ್ರಗಳು ಈ ಜಗತ್ತಿನಲ್ಲಿಲ್ಲ. ಅದನ್ನು ಪ್ರತಿಯೊಬ್ಬರೂ ತಮ್ಮ ಸ್ವಯಂ ಸಾಧನೆಯಿಂದಲೇ ಪಡೆದುಕೊಳ್ಳಬೇಕು", ಇದು ಶರಣರ, ಸಂತ-ಮಹಾಂತರ ಹಾಗು ದಾರ್ಶನಿಕರಾದ ನ್ಯಾಯಮೂರ್ತಿಗಳ ಅನುಭವಗಳ ಮಾರ್ಗದಿಂದ ಸಾಧ್ಯ ಎಂದು ಕಲ್ಯಾಣ ಆಶ್ರಮದ ಪ್ರವಚನ ಯೋಗಿ ಮಹಾಂತ ಸ್ವಾಮಿಗಳು ಮುದ್ಗಲ್ ಅವರು ಹೇಳಿದರು.

ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ್ ಪ್ರತಿಷ್ಠಾನ ರಾಯಚೂರು, ಸರ್ವಜ್ಞ ಮತ್ತು ಜಸ್ಟಿಸ್ ಶಿವರಾಜ ಪಾಟೀಲ್ ಪದವಿ ಪೂರ್ವ ವಿಜ್ಞಾನ ಮಹಾವಿದ್ಯಾಲಯ ಹಾಗೂ ಸರ್ವಜ್ಞ ಆಂಗ್ಲ ಮಾಧ್ಯಮ ಪ್ರೌಢ ಶಾಲೆಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿರುವ "ಮುಂಜಾವಿಗೊಂದು ನುಡಿ ಕಿರಣಗಳ ದರ್ಶನ ಎಂಬ 9 ದಿನಗಳ ವಿಶೇಷ ಪ್ರವಚನ ಮಾಲಿಕೆಯ ದ್ವಿತಿಯ ದಿನದಂದು ಅವರು ಆಶೀರ್ವಚನ ನೀಡಿದರು.

ಮುಂದುವರಿದು ಮಾತನಾಡಿದ ಶ್ರೀಗಳು, ಸೂರ್ಯನ ಆಗಮನದಿಂದ ಉತ್ತಮ ಚಟುವಟಿಕೆಗಳು ಪ್ರಾರಂಭ ಹೇಗೋ ಹಾಗೆ ನ್ಯಾಯಮೂರ್ತಿಗಳಾದ ಡಾ. ಶಿವರಾಜ್ ಪಾಟೀಲ ಅವರು ರಚಿಸಿದ 'ನುಡಿ ಕಿರಣ' ಪುಸ್ತಕದಲ್ಲಿನ ಮೌಲ್ಯಗಳು ನಮ್ಮ ಬದುಕನ್ನು ಬೆಳಗಿಸುವ, ಉಜ್ವಲಗೊಳಿಸುವ ಹಾಗೂ ಆದರ್ಶವಾಗಿಸುವ ಅಪಾರ ಶಕ್ತಿಯನ್ನು ಹೊಂದಿವೆ. ದೇವಾಲಯಗಳ ಶಿಖರಗಳಿಗೆ ಹಣವಿದ್ದವರು ಬಂಗಾರದ ಕಳಸ ಕೊಡಿಸಬಹುದು ಆದರೆ ನಿಮ್ಮ ಶಿರ ಹೊನ್ನ ಕಳಸ ವಾಗುವುದು ಇಂಥ ಮಹಾತ್ಮರ ಹೊನ್ನಕಿರಣ ಗಳಿಂದ ಸನ್ಮಾರ್ಗದಲ್ಲಿ ಸಾಗಿ, ಸದ್ಗುಣಿ ಗಳಾದಾಗ ಮಾತ್ರ ಎಂದು ಬೋಧಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಸಂಸ್ಥಾಪಕ ಪೊ. ಚನ್ನಾರೆಡ್ಡಿ ಪಾಟೀಲ್, ಮುಖ್ಯ ಶೈಕ್ಷಣಿಕ ನಿರ್ದೇಶಕ ಅಭಿಷೇಕ್ ಚನ್ನಾರೆಡ್ಡಿ ಪಾಟೀಲ್, ಪ್ರಾಂಶುಪಾಲ ಪ್ರಶಾಂತ್ ಕುಲಕರ್ಣಿ, ವಿನೂತಾ ಆರ್.ಬಿ., ಕರುಣೇಶ ಹಿರೇಮಠ, ಗುರುರಾಜ ಕುಲಕರ್ಣಿ ಸೇರಿದಂತೆ ಉಪನ್ಯಾಸಕರು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಜಮಖಾನೆ ವಿತರಣೆ

ಕಲಬುರಗಿ: ಸಮಾಜಸೇವೆಯ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿರುವ ಸ್ಪಂದನಾ ಗ್ರೂಪ್ ವತಿಯಿಂದ ಶ್ರೀ ಮ.ನಿ.ಪ್ರ. ಚರಲಿಂಗ ಮಹಾಸ್ವಾಮಿಗಳ ಗದ್ದುಗೆ ಮಠ, ಮಕ್ತಂಪುರನ ವಿದ್ಯಾರ್ಥಿಗಳಿಗೆ ಜಮಖಾನೆಗಳನ್ನು ವಿತರಿಸಲಾಯಿತು.

ಈ ಸೇವಾ ಕಾರ್ಯದಲ್ಲಿ ಸ್ಪಂದನಾ ಗ್ರೂಪ್‌ನ ಅಧ್ಯಕ್ಷೆ ಲತಾ ಎಸ್. ಬಿಲಗುಂದಿ, ಉಪಾಧ್ಯಕ್ಷೆ ಸುಮಾ ಎಸ್. ಪಪ್ಪಾ, ಕಾರ್ಯದರ್ಶಿ ಜ್ಯೋತಿ ಬಿ. ನಿಪ್ಪಾಣಿ, ಖಜಾಂಚಿ ರೂಪಾ ಬಿ. ಪವಾರ ಸೇರಿದಂತೆ ಗ್ರೂಪ್‌ನ ಸದಸ್ಯೆಯರಾದ ಶೀಲಾ ಕಲಬುರಗಿ, ವಿಜಯಲಕ್ಷ್ಮಿ ಪಾಟೀಲ್, ಈರಮ್ಮ ಭೀಮಳಿ, ರೇಣುಕಾ, ಸ್ವಂತ ಬನ್ನುಸ್ವಾಮಿ, ರಾಜೇಶ್ವರಿ ಪಪ್ಪ, ಭಾಗ್ಯ ಪಪ್ಪ ಹಾಗೂ ಜ್ಯೋತಿ ಪಪ್ಪ ಉಪಸ್ಥಿತರಿದ್ದು ಜಮಖಾನೆಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸದಸ್ಯರು, ಸಮಾಜಮುಖಿ ಸೇವಾ ಚಟುವಟಿಕೆಗಳನ್ನು ಮುಂದುವರಿಸಿಕೊಂಡು ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಅಗತ್ಯವಿರುವವರಿಗೆ ನೆರವು ನೀಡುವ ಕಾರ್ಯಗಳನ್ನು ಸ್ಪಂದನಾ ಗ್ರೂಪ್ ಮುಂದೆಯೂ ಕೈಗೊಳ್ಳಲಿದೆ ಎಂದು ತಿಳಿಸಿದರು. ಮಠದ ವತಿಯಿಂದ ಸ್ಪಂದನಾ ಗ್ರೂಪ್‌ನ ಸದಸ್ಯರಿಗೆ ಅಭಿನಂದನೆ ಸಲ್ಲಿಸಿ, ಈ ಸೇವಾ ಕಾರ್ಯಕ್ಕೆ ಕೃತಜ್ಞತೆ ವ್ಯಕ್ತಪಡಿಸಲಾಯಿತು.

# ನೇತ್ರ ತಪಾಸಣೆ ಮತ್ತು ಕನ್ನಡಕ ವಿತರಣೆ

ಕಲಬುರಗಿ: ನಗರದ ಹೀರಾನಗರ ಕೊಳಚೆ ಪ್ರದೇಶದಲ್ಲಿ ಸ್ಲಂ ಜನರ ಸಂಘಟನೆ-ಕರ್ನಾಟಕ, ಕಲಬುರಗಿ ಜಿಲ್ಲಾ ಸಮಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಲಬುರಗಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ವಿಭಾಗದ ಸಂಯುಕ್ತ ಆಶ್ರಯದಲ್ಲಿ ನಗರದ ಬಡ ಜನರಿಗಾಗಿ ಉಚಿತ ನೇತ್ರ ತಪಾಸಣೆ ಹಾಗೂ ಕನ್ನಡಕ ವಿತರಣಾ ಶಿಬಿರವನ್ನು ಆಯೋಜಿಸಲಾಯಿತು.

ಶಿಬಿರಕ್ಕೆ ಹೀರಾಪುರ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸುರೇಶ ನಾಯಕ ಚಾಲನೆ ನೀಡಿ, ಕಣ್ಣಿನ ಆರೋಗ್ಯದ ಮಹತ್ವ ಹಾಗೂ ನಿಯಮಿತ ತಪಾಸಣೆಯ ಅಗತ್ಯತೆಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಶಿಬಿರದಲ್ಲಿ ನೇತ್ರ



ಸಹಾಯಕ ವೈದ್ಯಾಧಿಕಾರಿಗಳಾದ ಗುರುಶಾಂತ್ ಮತ್ತು ಧನಶ್ಯಾಮ್ ಅವರು ಫಲಾನುಭವಿಗಳ ಕಣ್ಣಿನ ತಪಾಸಣೆ ನಡೆಸಿ ಅಗತ್ಯವಿರುವವರಿಗೆ ಉಚಿತ ಕನ್ನಡಕಗಳನ್ನು ವಿತರಿಸಿದರು.

ಕಾರ್ಯಕ್ರಮದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಅಲ್ಲಮಪ್ರಭು ನಿಂಬರ್ಗಾ, ಬ್ರಹ್ಮಾನಂದ ಮಿಂಚ, ಮಲ್ಲಿಕಾರ್ಜುನ ಸಿಂಗೆ, ರಾಹುಲ್ ಮೇಲ್ಮನಿ, ಮಹಮ್ಮದ್ ರಶೀದ್, ಪ್ರಭಾಕರ್ ನಿಂಬರ್ಗಾ, ವಿಜಯ್ ಕುಮಾರ್ ಜೋಗೂರ್ ಸೇರಿದಂತೆ ಸ್ಥಳೀಯ ಸಮಿತಿಯ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿ ಶಿಬಿರದ ಯಶಸ್ಸಿಗೆ ಸಹಕರಿಸಿದರು.

■ ಉದಯರಶ್ಮಿ ದಿನಪತ್ರಿಕೆ

# ಪ್ರತಿಕ್ರಿಯೆಗಳೇ ಬರಹದ ಮಾನದಂಡವಲ್ಲ

ಭಾವರಶ್ಮಿ

ಇಂದಿನ ಯುಗದಲ್ಲಿ ಪ್ರತಿಯೊಬ್ಬರಲ್ಲೂ ಒಂದು ವಿಚಿತ್ರ ಮನಸ್ಥಿತಿ ಬೆಳೆದುಬಿಟ್ಟಿದೆ. ಒಂದು ಬರಹ ಪ್ರಕಟವಾದ ತಕ್ಷಣ ಲೇಖಕನ ಕಣ್ಣು ಓದುಗರ ಮನಸ್ಸಿನತ್ತ ಹೋಗುವುದಿಲ್ಲ ಬದಲಾಗಿ ಎಷ್ಟು ಲೈಕ್ ಬಂದವು? ಎಷ್ಟು ಕಾಮೆಂಟ್ ಬಂದವು? ಎಷ್ಟು ಜನ ಹಂಚಿಕೊಂಡರು? ಎಂಬ ಅಂಕಿ-ಅಂಶಗಳತ್ತ ಓಡುತ್ತದೆ. ನಿಧಾನವಾಗಿ ಪ್ರತಿಕ್ರಿಯೆಗಳೇ ಬರಹದ ಗುಣಮಟ್ಟದ ಮಾನದಂಡ ಎಂಬ ತಪ್ಪು ಕಲ್ಪನೆ ಬೇರೂರುತ್ತಿದೆ.

ಆದರೆ ನಿಜಕ್ಕೂ ಪ್ರತಿಕ್ರಿಯೆಗಳೇ ಬರಹದ ಮೌಲ್ಯವನ್ನು ಅಳೆಯಬಹುದೇ?

ಒಂದು ಉತ್ತಮ ಬೀಜ ನೆಲದೊಳಗೆ ಬಿದ್ದ ತಕ್ಷಣ ಮರವಾಗುವುದಿಲ್ಲ. ಅದು ಸಮಯ ತೆಗೆದುಕೊಳ್ಳುತ್ತದೆ. ಹಾಗೆಯೇ ಒಂದು ಉತ್ತಮ ಬರಹವೂ ಪ್ರಕಟವಾದ ಕ್ಷಣದಲ್ಲೇ ಎಲ್ಲರ ಮೆಚ್ಚುಗೆ ಗಳಿಸಬೇಕೆಂಬ ನಿಯಮವಿಲ್ಲ. ಕೆಲವು ಬರಹಗಳು ಓದುಗರ ಮನಸ್ಸಿನಲ್ಲಿ ವರ್ಷಗಳ ಕಾಲ ಮಲಗಿದ್ದು, ಸೂಕ್ತ ಸಂದರ್ಭ ಬಂದಾಗ ಎಚ್ಚರಗೊಂಡು ಜನ ಮಾನಸದಲ್ಲಿ ಹೊಸ ನೆಲೆಯನ್ನು ಸ್ಥಾಪಿಸುತ್ತವೆ.

ಇತಿಹಾಸವನ್ನು ನೋಡಿದರೆ ಅನೇಕ ಶ್ರೇಷ್ಠ ಕೃತಿಗಳು ತಮ್ಮ ಕಾಲದಲ್ಲಿ ನಿರೀಕ್ಷಿತ ಮೆಚ್ಚುಗೆ ಪಡೆಯಲಿಲ್ಲ. ಆದ-'ರೆ ಕಾಲವೇ ಅವುಗಳ ಶ್ರೇಷ್ಠತೆಯನ್ನು ಸಾಬೀತುಪಡಿಸಿತು. ಆದ್ದರಿಂದ ಕ್ಷಣಿಕ ಪ್ರತಿಕ್ರಿಯೆಗಿಂತ ಕಾಲದ ಪರೀಕ್ಷೆಯೇ ಬರಹದ ನಿಜವಾದ ಮಾನದಂಡ.

ಪ್ರತಿಯೊಬ್ಬ ಓದುಗರೂ ತಮ್ಮದೇ ಆದ ದೃಷ್ಟಿಕೋನ, ಅನುಭವ ಮತ್ತು ಮನಸ್ಥಿತಿಯನ್ನು ಹೊಂದಿರುತ್ತಾರೆ. ಎಲ್ಲರಿಗೂ ಒಂದೇ ರೀತಿಯ ಬರಹ ಇಷ್ಟವಾಗಬೇಕೆಂಬ ನಿಯಮವಿಲ್ಲ. ಕೆಲವರು ಮೌನವಾಗಿ ಓದಿ



ಮನಸ್ಸಿನಲ್ಲೇ ಲೇಖಕನಿಗೆ ಅಭಿನಂದನೆ ಸಲ್ಲಿಸುತ್ತಾರೆ. ಅವರು ಕಾಮೆಂಟ್ ಮಾಡದೇ ಇರಬಹುದು, ಲೈಕ್ ಒತ್ತದೇ ಇರಬಹುದು. ಅದರಿಂದ ಬರಹದ ಮೌಲ್ಯ ಕಡಿಮೆಯಾಗುವುದಿಲ್ಲ.

ಇಂದಿನ ಡಿಜಿಟಲ್ ಜಗತ್ತಿನಲ್ಲಿ ಕೆಲವೊಮ್ಮೆ ಹಾಸ್ಯ, ವ್ಯಂಗ್ಯ ಸಂಚಲನ ಮೂಡಿಸುವ ಬರಹಗಳಿಗೆ ಸಾವಿರಾರು ಪ್ರತಿಕ್ರಿಯೆಗಳು ಬರುತ್ತವೆ. ಆದರೆ ಜೀವನ ಮೌಲ್ಯಗಳನ್ನು ಬೋಧಿಸುವ, ಚಿಂತನೆಗೆ ಹಚ್ಚುವ ಬರಹಗಳು ಮೌನವಾಗಿ ಕೆಲವೇ ಜನರ ಹೃದಯವನ್ನು ತಲುಪುತ್ತವೆ.

ಒಬ್ಬ ನಿಜವಾದ ಲೇಖಕ ತನ್ನ ಬರಹವನ್ನು ಮೆಚ್ಚುಗೆಯ ಭಿಕ್ಷೆಗಾಗಿ ಬರೆಯುವುದಿಲ್ಲ. ತನ್ನ ಮನಸ್ಸಿನ ಸತ್ಯವನ್ನು ಸಮಾಜದ ಮುಂದೆ ಇಡುವ ಜವಾಬ್ದಾರಿಯಿಂದ ಬರೆಯುತ್ತಾನೆ. ಪ್ರತಿಕ್ರಿಯೆ ಸಿಕ್ಕರೆ ಸಂತೋಷಪಡುತ್ತಾನೆ ಸಿಗದಿದ್ದರೂ ತನ್ನ ಲೇಖನಿಯನ್ನು ನಿಲ್ಲಿಸುವುದಿಲ್ಲ. ಏಕೆಂದರೆ ಅವನ ಗುರಿ ಲೈಕ್ಗಳನ್ನು ಗಿಟ್ಟಿಸುವುದಲ್ಲ ಚಿಂತನೆಗೆ ಒಳಪಡಿಸುವುದು.


ಬರಹವೆಂದರೆ ಜನರನ್ನು ಸಂತೋಷಪಡಿಸುವ ಸಾಧನ ಮಾತ್ರವಲ್ಲ ಅದು ಸಮಾಜವನ್ನು ಎಚ್ಚರಿಸುವ ಕೈಗನ್ನಡಿಯೂ ಹೌದು ಕನ್ನಡಿ ನಮ್ಮ ಮುಖವನ್ನು ಹೇಗಿದೆಯೋ ಹಾಗೆಯೇ ತೋರಿಸುತ್ತದೆ. ಅದನ್ನು ನೋಡಿ ಕೆಲವರು ನಗಬಹುದು ಕೆಲವರು ಬೇಸರಪಡಬಹುದು. ಆದರೆ ಕನ್ನಡಿ ತನ್ನ ಕೆಲಸವನ್ನು ಮರೆಯದೆ ಸದಾ ಸತ್ಯವನ್ನು ತೋರಿಸುವುದು. ಬರಹದ ಕರ್ತವ್ಯವೂ ಅದೇ.

ಹೀಗಾಗಿ ಪ್ರತಿಕ್ರಿಯೆಗಳ ಸಂಖ್ಯೆ ಹೆಚ್ಚಿದೆ ಎಂದ ಮಾತ್ರಕ್ಕೆ ಬರಹ ಶ್ರೇಷ್ಠವಾಗುವುದಿಲ್ಲ. ಪ್ರತಿಕ್ರಿಯೆಗಳು ಕಡಿಮೆ ಬಂದವು ಎಂದ ಮಾತ್ರಕ್ಕೆ ಬರಹ ಕಳಪೆಯಾಗುವುದಿಲ್ಲ. ನಿಜವಾದ ಬರಹ ಓದುಗರ ಮನಸ್ಸಿನಲ್ಲಿ ಪ್ರಶ್ನೆಗಳನ್ನು ಹುಟ್ಟಿಸುತ್ತದೆ, ಬದುಕಿನ ಬಗ್ಗೆ ಹೊಸ ಚಿಂತನೆ ಮೂಡಿಸುತ್ತದೆ, ಮನುಷ್ಯನನ್ನು ಸ್ವಲ್ಪವಾದರೂ ಉತ್ತಮ ವ್ಯಕ್ತಿಯನ್ನಾಗಿ ರೂಪಿಸುತ್ತದೆ. ಅದೇ ಬರಹದ ಯಶಸ್ಸು.

ಬರಹದ ಗುಣಮಟ್ಟವನ್ನು ಲೈಕ್‌ಗಳ ಸಂಖ್ಯೆ ಅಳೆಯುವುದಿಲ್ಲ ಬರಹ ಮನಸ್ಸುಗಳನ್ನು ಎಷ್ಟು ಆಳವಾಗಿ ಮುಟ್ಟಿತು ಎಂಬುದನು ಅಳೆಯುತ್ತದೆ. ಪ್ರತಿಕ್ರಿಯೆಗಳು ಕ್ಷಣಿಕ, ಆದರೆ ಪರಿಣಾಮ ಶಾಶ್ವತ. ಆದ್ದರಿಂದ ಲೇಖಕನಿಗೆ ನಿಜವಾದ ಮಾನದಂಡ ಪ್ರತಿಕ್ರಿಯೆಯೆ ಅಲ್ಲ ಬರಹದೊಳಗಿನ ಅರಿಯುವ ಸತ್ವ ಮತ್ತು ಪ್ರಾಮಾಣಿಕತೆ.



ಪ್ರಸ್ತುತ ಕ್ಷಣಿಕ ಆಕರ್ಷಣೆಗಳ ಯುಗದಲ್ಲಿ ಓದುಗರ ಮೆಚ್ಚುಗೆ ಅಥವಾ ಟೀಕೆಗಳೆಂಬ ಪ್ರತಿಕ್ರಿಯೆಗಳು ಬರಹದ ಅಂತಿಮ ಮೌಲ್ಯವನ್ನು ನಿರ್ಧರಿಸಲು ಸಾಧ್ಯವಿಲ್ಲ. ಲೇಖಕನ ಪ್ರಾಮಾಣಿಕತೆ, ವಸ್ತುನಿಷ್ಠತೆ, ಬದ್ಧತೆ ಮತ್ತು ಸಮಾಜದ ಒಳಿತಿಗಾಗಿ ಬರೆಯುವ ಧ್ಯೇಯವೇ ಬರಹದ ನಿಜವಾದ ಮಾನದಂಡ.



ತಾತ್ಕಾಲಿಕವಾಗಿ ಸಿಗುವ ಲೈಕ್‌ಗಳು ಅಥವಾ ವಿರೋಧಗಳು ಲೇಖನದ ಗುಣಮಟ್ಟವನ್ನು ಅಳೆಯುವುದಿಲ್ಲ. ಬದಲಿಗೆ, ಸತ್ಯದ ಶೋಧನೆ ಮತ್ತು ಓದುಗರ ಆಲೋಚನಾ ಲಹರಿ ಅಳೆಯುತ್ತದೆ ಸಕಾರಾತ್ಮಕವಾಗಿ ಬದಲಾಯಿಸುವ ಸಾಮರ್ಥ್ಯವೇ ಬರಹದ ಶಕ್ತಿ.

ಲೇಖನ
■ ಅವಿನಾಶ ಸೆರೆಮನಿ
ಬೈಲಹೊಂಗಲ



# ನೈತಿಕ ಮೌಲ್ಯಗಳ ಮೇಲೆ ಸಾಮಾಜಿಕ ಜಾಲತಾಣಗಳ ಪ್ರಭಾವ

■ ಉದಯರಶ್ಮಿ ದಿನಪತ್ರಿಕೆ

## ಭಾವರಶ್ಮಿ

ಹೌದು ಹಿಂದಿನ ದಿನಗಳ ಮತ್ತು ಇಂದಿನ ದಿನಗಳ ವರ್ತನೆಯನ್ನು ತುಲನೆ ಮಾಡಿದರೆ ಆ ವ್ಯತ್ಯಾಸಗಳು ವೇದ್ಯವಾಗುತ್ತವೆ.

ಹೆಣ್ಣುಮಕ್ಕಳು 11 –12 ವರ್ಷಕ್ಕೇನೆ ಋತುಮತಿಯಾಗುವುದು, ಡೆಲಿವರಿ ದಿನಾಂಕಕ್ಕೆ 15– 20 ದಿನಗಳ ಮುಂಚೆಯೇ ಮಗು ಆಗುವುದು, ಮೆನೋಪಾಸ್ ಗೆ 10–12 ವರ್ಷಗಳ ಮುಂಚೆಯೇ ಋತುಸ್ರಾವ(ಮುಟ್ಟು) ನಿಲ್ಲುವುದು, ಇನ್ನು ಹುಡುಗರ ವಿಷಯಕ್ಕೆ ಬಂದರೆ, ಡಿಗ್ರಿಗೆ ಬರಬೇಕಾಗಿದ್ದ ಗಡ್ಡ – ಮೀಸೆ, ಇನ್ನೂ ಹೈಸ್ಕೂಲು ಪಿಯುಸಿಗೇನೆ ಬಂದುಬಿಡುವುದು, 4–5 ವರ್ಷಕ್ಕೇನೇ ಬಿಪಿ, ಶುಗರ್, ಹಾರ್ಟಅಟ್ಯಾಕ್ ಇವೆಲ್ಲವೂ ಇವಾಗಿನ ಆಹಾರದಿಂದ ಮತ್ತು ಜೀವನ ಕ್ರಮದಿಂದಾದ ಬದಲಾವಣೆಗಳು ಎಂದಿಟ್ಟುಕೊಳ್ಳೋಣ.

ಆದರೆ ಮಕ್ಕಳೆಂದರೆ ಮುಗ್ದರು, ಅವರು ದೇವ–ರಿಗೆ ಸಮಾನ, ಅವರು ಸತ್ಯವನ್ನು ಬಿಟ್ಟು ಬೇರೇನನ್ನೂ ಹೇಳುವುದಿಲ್ಲ, ಹೇಳುವುದಕ್ಕೆ ತಿಳಿಯುವುದೂ ಇಲ್ಲ ಎಂಬುದು ಸಾಮಾನ್ಯ ನಂಬಿಕೆ. ಆದರೆ ಇವಾಗಿನ ಕೆಲವು ಮಕ್ಕಳ ಉದ್ಧಟತನದ ಮಾತುಗಳನ್ನೂ ವರ್ತನೆಗಳನ್ನೂ ನೋಡಿದಾಗ ಆಶ್ಚರ್ಯವಾಗುತ್ತದೆ. 'ಅರೇ ಹೀಗೂ ಹೇಳಬಹುದೆ? ದೊಡ್ಡವರಾದ ನಾವೇ ಇಷ್ಟು ಹದ್ದುಮೀರಿ ಮಾತನಾಡುವುದಿಲ್ಲವಲ್ಲ' ಎನಿಸುತ್ತದೆ. ಅದ್ಯಾರಿಂದ ಇವರು ಹೀಗೆ ಮಾತನಾಡುವುದು ಕಲಿತರು, ಅದ್ಯಾರಿಂದ ಇವರು ಡ್ರಗ್ಸ್ ತೆಗೆದುಕೊಳ್ಳುವುದು ಕಲಿತರು, ಅದ್ಯಾರಿಂದ ಇವರು ಗರ್ಲ್ ಫ್ರೆಂಡ್ಸ್/ ಬಾಯ್ ಫ್ರೆಂಡ್ಸ್ ಇಟ್ಟುಕೊಳ್ಳುವುದು ಕಲಿತರು, ಇವೇ ಮುಂತಾದ ಪ್ರಶ್ನೆಗಳು ನಮ್ಮನ್ನು ಕಾಡಹತ್ತಿದಾಗ, ಒಂದೊಂದಾಗೆ ತರಂಗಗಳು ತೆರೆದುಕೊಳ್ಳತೊಡಗುತ್ತವೆ.

ಈ ಹಿಂದಿನ ತಲೆಮಾರಿನಲ್ಲಿ ಸಿಟಿಯಲ್ಲಿ ಅಲ್ಲೊಂದು ಇಲ್ಲೊಂದು ಟಿವಿಗಳಾದರೂ ಇದ್ದವೇನೋ, ಆದ–'ರೆ ಹಳ್ಳಿಗಳಲ್ಲಿ, ಇಡೀ ಹಳ್ಳಿಗೆ 1–2 ಟಿವಿಗಳಿದ್ದರೆ ಅದೇ ದೊಡ್ಡ ವಿಷಯ. ಇನ್ನು ಫೋನು ಕನಸೇ ಬಿಡಿ. ಅದೂ ಆಮೇಲೆ ಬಂದದ್ದು ಕೀಪ್ಯಾಡು ಫೋನ್, ಅದನ್ನು ಆಪರೇಟ್ ಮಾಡಲೂ ಸಹ ಸರಿಯಾಗಿ ಬರುತ್ತಿದ್ದದ್ದಿಲ್ಲ.




ಇನ್ನು ಹೇಗೆತಾನೆ ಮಕ್ಕಳು ಕೆಟ್ಟಾರು?!

ಈವಾಗಿನ ದಿನಗಳಲ್ಲಿ ಟಿವಿಯಲ್ಲೇ ರಾಜಾರೋಷವಾಗಿ ಧೂಮಪಾನ, ಮದ್ಯಪಾನ



ಮಾಡೋದು. ಧೈರ್ಯವಾಗಿ & ಸ್ಟೈಲ್ ಆಗಿ ಸಿಗರೇಟ್ ಸೇದೋದು(ಸ್ಮೋಕ್) ತೋರಿಸ್ತಾರೆ, ಹುಡುಗ ಹುಡುಗಿ ಮುದ್ದಾಡೋದರಿಂದ(ರೊಮ್ಯಾನ್ಸ್) ಹಿಡಿದು, ಆಸಿಡ್ ಹಾಕೋದರವರೆಗೆ, ಹೊಲಸು ಪದಗಳನ್ನು ಬಳಸಿ ಮಾತನಾಡೋದು, ಡ್ರಗ್ಸ್ ಬೆಳೆಯೋದು, ತ–ರಿಸಿಕೊಳ್ಳೋದು, ಬಳಸೋದು ಎಲ್ಲವನ್ನೂ ತೋರಿಸ್ತಾರೆ.

ದೂರದರ್ಶನ ಎಂಬೋದು ಈವಾಗಿನ ದಿನಗಳಲ್ಲಿ ತೀರಾ ಬೇಸಿಕ್. ಅದಕ್ಕೂ ಮೀರಿದ ದೊಡ್ಡಪ್ಪಗಳು ತುಂಬಾ ಇವೆ. ಆಂಡ್ರಾಯಿಡ್ ಟಚ್ ಸ್ಕ್ರೀನ್ ಮೊಬೈಲ್‌ಗಳು. ಟಚ್ ಮಾಡಿದರೆ ಸಾಕು, ಬೇಕಾದ್ದೆಲ್ಲ ಬೆರಳಲ್ಲೇ. ಸಿಕ್ಕ



ಸಿಕ್ಕ ಹುಡುಗ ಹುಡುಗಿಯರ ಜೊತೆ, ಮಾತು–ಕಥೆ, ಲಲ್ಲಾಟ–ಚೆಲ್ಲಾಟ ಎಲ್ಲವೂ.. ವಾಟ್ಸಪ್‌ನಲ್ಲಿ. ಇತರರಿಗೆ ಸಾಕ್ಷಿ ಉಳಿಯಬಾರದೆಂದರೆ, ಇನ್ಸಾಗ್ರಾಮ್, ಸ್ನ್ಯಾಪ್ ಚಾಟ್, ಟೆಲಿಗ್ರಾಂ, ಫೇಸ್ಬುಕ್... ಹೀಗೆ ಇನ್ನು ಏನೇನು ಇವೆಯೋ ಬಲ್ಲವರಾರು. ಆ ತರಹದ ವಿಷಯಗಳಲ್ಲಿ ಅವರು ಪಿ ಹೆಚ್ ಡಿ ಮಾಡಿಬಿಟ್ಟಿರುತ್ತಾರೆ. ಪೋಷಕರಿಗೆ ಕಾಡಿ ಬೇಡಿ ತೆಗೆಸಿಕೊಂಡ ಫೋನು, ಗಾಡಿ, ಇವೆರಡು ಇದ್ದಮೇಲೆ ಬೇರೇನು ಬೇಕು? 'ಅಂಗೈಲೆ ಪ್ರಪಂಚ' ಒಬ್ಬರಿಗೆ ಉಪಾಯ ಹೇಳಿಕೊಡಲು ಒಂದು ಫ್ರೆಂಡ್, ಮತ್ತೊಬ್ಬರಿಗೆ ಐಡಿಯಾ ಹೇಳಿಕೊಡಲು ಮತ್ತೊಂದು ಫ್ರೆಂಡ್. 'ಹಾಗಲಿಕಾಯಿಗೆ ಬೇವಿನಕಾಯಿ ಸಾಕ್ಷಿ'. ಆಯ್ತಲ್ಲ ಅಲ್ಲಿಗೆ ಮಕ್ಕಳ ಮನಸು ಕೆಡಲು ಮತ್ತೇನು ಬೇಕು?

ಇರುವುದೊಂದೋ ಎರಡೋ ಮಕ್ಕಳು. ಗಂಡ ಹೆಂಡತಿ ಇಬ್ಬರೂ ದುಡಿಯುವುದು ಮಕ್ಕಳ ಐಷಾರಾಮಿ ಜೀವನಕ್ಕೆ. ಕಷ್ಟದ ಕಷ್ಟ ಗೊತ್ತಿಲ್ಲ, ನಿಜವಾದ ಸುಖದ ಅರ್ಥವೂ ತಿಳಿದಿಲ್ಲ. ಕ್ಷಣಿಕ ಆಕರ್ಷಣೆಯ ಗುಂಗಿನಲ್ಲಿ ಗುಲಾಮರಾದ ಮಕ್ಕಳಿಗೆ, ಬೇರೆ ಪ್ರಪಂಚ ಎಲ್ಲಿ ಕಾಣಿಸೀತು. ಮತ್ತೊಂದು ಮುಖ್ಯ ವಿಷಯವೆಂದರೇ ಇವಾಗ ಹಣದ ಬವಣೆಯೂ ಇಲ್ಲ. ಈಗೆಂದರೆ ಈಗ ದುಡಿದು ನಾಲ್ಕು ಕಾಸು ಸಂಪಾದನೆ ಮಾಡಿ ಸಧ್ಯದ ಬವಣೆ ತೀರುವಷ್ಟು ಹಣ ಸಂಪಾದಿಸುವ ನೂರಾರು ದಾರಿಗಳಿವೆ. ಕಂಪ್ಯೂಟರ್ ಅಥವಾ ಫೋನಿನ ಮೇಲೆ ಜಸ್ಟ್ ಒಂದು ಟಚ್ ಮಾಡಿದರೆ, ತಮಗೆ ಬೇಕಾದ ಎಲ್ಲಾ ಮಾಹಿತಿ, ದಾರಿಗಳು ಸಿಗಬೇಕಾದರೆ, ಅವನ್ನೆಲ್ಲ ದಕ್ಕಿಸಿಕೊಳ್ಳಬಲ್ಲ ಅವರು ಇನ್ನಾವ ಶಿಕ್ಷಕರಿಗೆ, ಪೋಷಕರಿಗೆ ಅಥವಾ ಸಮಾಜ–ಕ್ಕೆ ಹೆದರಿಯಾರು? ಕೆಟ್ಟುಹೋದ ಒಂದೇ ಒಂದು ಟಮೋಟ ಜೊತೆ ಇದ್ದ ಉಳಿದ ಟಮೋಟಗಳೂ ಸಹ ಕೆಡುತ್ತಾ ಹೋಗುವಂತೆ, ತಮ್ಮ ಜೊತೆ ಇರುವ ಸ್ನೇಹಿತರನ್ನೂ ಸಹ ಕೆಡಿಸುತ್ತಾ ಹೋಗುತ್ತಾರೆ.

ನೈತಿಕ ಮೌಲ್ಯವೇ? ಹಾಗೆಂದರೇನು ಎಂದು ಕೇಳುವಂತೆ ಈ ಸಾಮಾಜಿಕ ಜಾಲತಾಣಗಳು ಯುವ ಪೀಳಿಗೆಯನ್ನು ಕೆಡಿಸಿ, ತಮ್ಮ ಗುಲಾಮರನ್ನಾಗಿ ಮಾಡಿಕೊಂಡುಬಿಟ್ಟಿವೆ ಎಂಬುದೇ ಶೋಚನೀಯ ಸಂಗತಿ.

ಲೇಖನ
ರಶ್ಮಿ ಕೆ. ವಿಶ್ವನಾಥ್
ಮೈಸೂರು



## ಮಹಾಬಳೇಶ್ವರದಲ್ಲಿ ನಡೆವ ಗಂಗಾಪೂಜೆಗೆ ಪಾಲ್ಗೊಳ್ಳಲು ಕರೆ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಪ್ರತಿ ವರ್ಷವೂ ನಡೆಯುವಂತೆ ಈ ವರ್ಷವೂ ಉತ್ತರ ಕರ್ನಾಟಕದ ಜೀವನದಿ ಕೃಷ್ಣಾ ನದಿಯ ಉಗಮಸ್ಥಳ ಮಹಾಬಳೇಶ್ವರದಲ್ಲಿ ಗಂಗಾಪೂಜೆ ನೆರವೇರಿಸಲು ಅವಳಿ ಜಿಲ್ಲೆಯ ರೈತ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಯುವ ಮುಖಂಡರಾದ ಜಗದೀಶ ಸುನಗದ ಮತ್ತು ಈರಯ್ಯ ಹ. ಮಠಪತಿ ಮನವಿ ಮಾಡಿದ್ದಾರೆ. ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಎಸ್.ಕೆ. ಬೆಳ್ಳುಬ್ಬಿ ಅವರ ನೇತೃತ್ವದಲ್ಲಿ ಕಳೆದ 25 ವರ್ಷಗಳಿಂದ ಪಂಚನದಿಗಳು ಗೋಮಾತೆಯ ಬಾಯಿ ಮೂಲಕ ಹರಿಯುವ ಪವಿತ್ರ ಕ್ಷೇತ್ರವಾದ ಮಹಾಬಳೇಶ್ವರದಲ್ಲಿ ಗಂಗಾಪೂಜೆ ನೆರವೇರಿಸಲಾಗುತ್ತಿದೆ. ವರ್ಷಪೂರ್ತಿ ಕೃಷ್ಣಾ ನದಿ ಮೈದುಂಬಿಕೊಂಡು ನದಿ ಪಾತ್ರದ ಸಕಲ ಜೀವಿಗಳಿಗೆ ಜಲ ಒದಗಿ ಪಾವನಗೊಳಿಸಲಿ ಎಂಬ ಸಂಕಲ್ಪದೊಂದಿಗೆ ಈ ಪೂಜೆ ನಡೆಯುತ್ತಿದೆ ಎಂದು ತಿಳಿಸಿದರು. ಈ ಹಿನ್ನೆಲೆ ರೈತರು ಇಂತಹ ಪವಿತ್ರ ಕಾರ್ಯದಲ್ಲಿ ಭಾಗವಹಿಸಿ ಗಂಗಾಪೂಜೆಯನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ದಿನಾಂಕ 28 ಮಂಗಳವಾರ ಮುಂಜಾನೆ 9.30ಕ್ಕೆ ಪಟ್ಟಣದ ದ್ಯಾಮವ್ವ ದೇವಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ನಂತರ ವಿಜಯಪುರ ತಿಕೋಟಾ ಜತ್ತಕರಾಡ ಸಾತಾರ ಮಾರ್ಗವಾಗಿ ಮಹಾಬಳೇಶ್ವರಕ್ಕೆ ಪ್ರಯಾಣ ಕೈಗೊಳ್ಳಲಾಗುವುದು. ಅಲ್ಲಿ ವಸತಿ ಮಾಡಿಕೊಂಡು ಮರುದಿನ ಬುಧವಾರ ನಸುಕಿನ ಜಾವ ಮಹಾಬಳೇಶ್ವರದಲ್ಲಿರುವ ಉದ್ಭವ ಲಿಂಗ ಹಾಗೂ ಕೃಷ್ಣಾ ನದಿ ಉಗಮ ಸ್ಥಳದಲ್ಲಿ ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ನೂರಾರು ರೈತರೊಂದಿಗೆ ವಿಶೇಷ ಪೂಜೆ ಸಲ್ಲಿಸಲಾಗುವುದು ಎಂದು ಅವರು ವಿವರಿಸಿದರು.

## ಸಂಗಮೇಶ್ವರ ವಿದ್ಯಾವರ್ಧಕ ಸಂಘ: ಇಂದು ವಿವಿಧ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಪಟ್ಟಣದ ಶ್ರೀ ಸಂಗಮೇಶ್ವರ ವಿದ್ಯಾವರ್ಧಕ ಸಂಘದ ಅಧೀನದಲ್ಲಿರುವ ಶಾಲಾ–ಕಾಲೇಜುಗಳ ಆವರಣದಲ್ಲಿ ಜುಲೈ 28ರಂದು ಮಂಗಳವಾರ ಬೆಳಿಗ್ಗೆ 10 ಗಂಟೆಗೆ ವಿವಿಧ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಲಿವೆ ಎಂದು ಸಂಸ್ಥೆಯ ನಿರ್ದೇಶಕ ಟಿ.ಟಿ. ಹಗೇದಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಈ ಸಂದರ್ಭದಲ್ಲಿ ಪದವಿ ಪೂರ್ವ ವಿಜ್ಞಾನ ವಿಭಾಗದ ಪ್ರಾರಂಭೋತ್ಸವ, ಎಲ್ಲಾ ವಿಭಾಗಗಳ ಪ್ರಥ–'ಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ, ಪ್ರೌಢಶಾಲೆಯ ಕಂಪ್ಯೂಟರ್ ಕೊಠಡಿ ಉದ್ಘಾಟನೆ, ಹಿರಿಯ ಪ್ರಾಥಮಿಕ ಶಾಲೆಯ ಭೋಜನ ಆಸನಗಳ ಉದ್ಘಾಟನೆ, ಜೊತೆಗೆ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಶ್ರೀಶೈಲ ಬಿ. ಪತಂಗಿಯವರ ಜನ್ಮದಿನದ ವಜ್ರ ಮಹೋತ್ಸವ ಹಾಗೂ ಪಟ್ಟಣದ ಯುವ ಸಾಹಿತಿ ಮಲ್ಲು ಗಿಡ್ಡಪ್ಪಗೋಳ ಸಂಪಾದಿತ "ವಿದ್ಯಾಸಂಗಮ ಸ್ಮರಣ ಸಂಚಿಕೆ" ಬಿಡುಗಡೆ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಬಸಪ್ಪ ಉ. ಗಿಡ್ಡಪ್ಪಗೋಳ ವಹಿಸುವರು. ಉದ್ಘಾಟನೆಯನ್ನು ಬೆಳಗಾವಿಯ ವಿಶ್ರಾಂತ ಪ್ರಾಚಾರ್ಯ ಡಾ. ಬಸವರಾಜ ಜಗಜಂಪಿ ನೆರವೇರಿಸುವರು. ಪ್ರೌಢಶಾಲೆಯ ಕಂಪ್ಯೂಟ–ರ್ ಕೊಠಡಿಯನ್ನು ಬೆಳಗಾವಿ ಲೋಕಾಯುಕ್ತ ಜಿಲ್ಲಾ ವ–ರಿಷ್ಠಾಧಿಕಾರಿ ಪ್ರಸನ್ನ ಬಿ. ದೇಸಾಯಿ ಉದ್ಘಾಟಿಸುವರು.

ಸ್ಮರಣ ಸಂಚಿಕೆಯನ್ನು ಸಚಿವ ಡಾ. ಎಂ.ಬಿ. ಪಾಟೀಲ ಅವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ. ಮಹಾಂತೇಶ ಬಿರಾದಾರ ಬಿಡುಗಡೆ ಮಾಡುವರು. ಪದವಿ ಪೂರ್ವ ವಿಜ್ಞಾನ ವಿಭಾಗದ ಉದ್ಘಾಟನೆಯನ್ನು ಪಿಯು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೆ.ಎ. ಉಪ್ಪಾರ ನೆರವೇರಿಸುವರು. ವಿಜ್ಞಾನ ಪ್ರಯೋಗಾಲಯವನ್ನು ಪುಣೆಯ ಬ್ಲೂರಿಗರ್ ರಿಟೇಲ್ ವ್ಯವಸ್ಥಾಪಕ ನಿರ್ದೇಶಕ ವಿಜಯಮಹಾಂತೇಶ ಗಾಜಿ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಪಟ್ಟಣ ಪಂಚಾಯತಿ ಅಧ್ಯಕ್ಷ ಹಾಗೂ ಸಂಸ್ಥೆಯ ನಿರ್ದೇಶಕ ಚನಮಲ್ಲಪ್ಪ ಗಿಡ್ಡಪ್ಪಗೋಳ, ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ ಶಾಖಾಧಿಕಾರಿ ಪ್ರಕಾಶ ಗೊಂಗಡಿ ಭಾಗವಹಿಸುವರು. ಅತಿಥಿಗಳಾಗಿ ಡಾ. ಎಪಿಜೆ ಅಬ್ದುಲ್ ಕಲಾಂ ಶಿಕ್ಷಣ ಸಂಸ್ಥೆ ಅಧ್ಯಕ್ಷ ಉಸ್ಮಾನ ಪಟೇಲ್ ಖಾನ್ನವರ, ಸಾಹಿತಿ ಅಶೋಕ ಹಂಚಲಿ, ನಿವೃತ್ತ ಮುಖ್ಯೋಪಾಧ್ಯಾಯ ಬಸವರಾಜ ಹಂಗರಗಿ ಉಪಸ್ಥಿತ–ರಿರುವರು.

ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕರಾದ ನಾಗಪ್ಪ ಮೇಲಗಿರಿ, ವಿನೀತಕುಮಾರ ದೇಸಾಯಿ, ಸುನಂದಬಾಯಿ ಗಿಡ್ಡಪ್ಪಗೋಳ, ಶಂಕ್ರಪ್ಪ ಕುಂಬಾರ, ಶಿವಾನಂದ ಶೀಲವಂತ ಸೇರಿದಂತೆ ಅನೇಕರು ಗೌರವ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.




## ಎಸ್ಐಆರ್ ಪ್ರಕ್ರಿಯೆಯಲ್ಲಿ ಮಾಜಿ ಸಚಿವ ಎಸ್.ಕೆ.ಬೆಳ್ಳುಬ್ಬಿ ಭಾಗಿ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಮತದಾರರ ಪಟ್ಟಿಯ ಪರಿಷ್ಕರಣೆ ಅಂಗವಾಗಿ ನಡೆಯುತ್ತಿರುವ ಅನಿಮೇಷನ್ ಫಾರ್ಮ್‌ಗಳ ಭರ್ತಿ ಕಾರ್ಯದಲ್ಲಿ ಮಾಜಿ ಸಚಿವರಾದ ಎಸ್.ಕೆ. ಬೆಳ್ಳುಬ್ಬಿ ಅವರು ಭಾಗವಹಿಸಿ ಸ್ವತಃ ಫಾರ್ಮ್ ಭರ್ತಿ ಮಾಡಿದರು. ತಾಲೂಕಿನ ಮತಗಟ್ಟೆ ಸಂಖ್ಯೆ 176ರಲ್ಲಿ ಈ ಕಾರ್ಯ ನಡೆದಿದ್ದು, ಬಿ.ಎಲ್.ಓ ಸದ್ದಾಮಹುಸೇನ ಹೊನ್ಯಾಳ ಅವರ ನೇತೃತ್ವದಲ್ಲಿ ಪ್ರಕ್ರಿಯೆ ನಡೆಯಿತು. ಈ ಸಂದರ್ಭದಲ್ಲಿ ಬಿಎಲ್ಎ–2 ಸುಭಾಷ್ ರಾಮಚಂದ್ರ ಭಜಂತ್ರಿ, ಅಂಗನವಾಡಿ ಸಹಾಯಕಿಯರಾದ ಗಾಯತ್ರಿ ಮೇಡಂ ಹಾಗೂ ಶಂಕ್ರಮ್ಮ ಪಡಸಲಗಿ ಉಪಸ್ಥಿತರಿದ್ದರು.ಮತದಾರರು ತಮ್ಮ ವಿವರಗಳನ್ನು ಸರಿಯಾಗಿ ನವೀಕರಿಸಿಕೊಳ್ಳುವಂತೆ ಈ ಸಂದರ್ಭದಲ್ಲಿ ತಿಳಿಸಲಾಯಿತು.

## ವಿದ್ಯಾರ್ಥಿ–ಯುವಜನರ ಹೋರಾಟಕ್ಕೆ ಸಂದ ಜಯ ದಲಿತ ವಿದ್ಯಾರ್ಥಿ ಪರಿಷತ್



ಕಲಬುರಗಿ:ನೀಟ್ (NEET) ಪರೀಕ್ಷೆಯಲ್ಲಿ ನಡೆದ ಅಕ್ರಮಗಳು ಹಾಗೂ ಅವ್ಯವಹಾರಗಳ ಹಿನ್ನೆಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ದೇಶದ ವಿದ್ಯಾರ್ಥಿ ಮತ್ತು ಯುವಜನರ ನಿರಂತರ ಹೋರಾಟಕ್ಕೆ ದೊರೆತ ಮಹತ್ವದ ಜಯವಾಗಿದೆ ಎಂದು ದಲಿತ ವಿದ್ಯಾರ್ಥಿ ಪರಿಷತ್ ಹೇಳಿದೆ.

ಸಂಘಟನೆಯ ರಾಜ್ಯ ಸಂಚಾಲಕ ಬಾಲಾಜಿ ಕಾಂಬಳೆ ಅವರು ಪ್ರಕಟಣೆಯಲ್ಲಿ ಮಾತನಾಡಿ, ದೇಶದಾದ್ಯಂತ ವಿದ್ಯಾರ್ಥಿಗಳು, ಯುವಜನರು ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳು ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳ ವಿರುದ್ಧ ನಿರಂತರವಾಗಿ ಧ್ವನಿ ಎತ್ತಿದ್ದರು. ಈ ಜನಾಭಿಪ್ರಾಯ ಮತ್ತು ಹೋರಾಟದ ಒತ್ತಡದ ಪರಿಣಾಮವಾಗಿ ಕೇಂದ್ರ ಸರ್ಕಾರ ತನ್ನ ತಪ್ಪನ್ನು ಒಪ್ಪಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ಪ್ರಜಾಪ್ರಭುತ್ವದಲ್ಲಿ ಜನರ ಧ್ವನಿಯ ಶಕ್ತಿಗೆ ಸಾಕ್ಷಿಯಾಗಿದೆ ಎಂದು ತಿಳಿಸಿದ್ದಾರೆ.ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡುವ ಯಾವುದೇ ನೀತಿ ಅಥವಾ ಆಡಳಿತ ವೈಫಲ್ಯವನ್ನು ದೇಶದ ಯುವಜನತೆ ಸಹಿಸುವುದಿಲ್ಲ ಎಂಬ ಸ್ಪಷ್ಟ ಸಂದೇಶ ಈ ಬೆಳವಣಿಗೆಯಿಂದ ಕೇಂದ್ರ ಸರ್ಕಾರಕ್ಕೆ ತಲುಪಿದೆ. ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ವಿದ್ಯಾರ್ಥಿ ಮತ್ತು ಯುವಜನ ವಿರೋಧಿ ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ ಎಚ್ಚರಿಕೆಯಿಂದ ನಡೆದುಕೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಶಿಕ್ಷಣ ಕ್ಷೇತ್ರದಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಹಾಗೂ ಸಮಾನ ಅವಕಾಶಗಳನ್ನು ಖಚಿತಪಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಅಗತ್ಯ ಸುಧಾರಣೆಗಳನ್ನು ಜಾರಿಗೆ ತರಬೇಕು. ವಿದ್ಯಾರ್ಥಿಗಳ ಭವಿಷ್ಯವನ್ನು ರಾಜಕೀಯ ಅಥವಾ ಆಡಳಿತಾತ್ಮಕ ವೈಫಲ್ಯಗಳ ಬಲಿಯಾಗಲು ಬಿಡಬಾರದು ಎಂದು ದಲಿತ ವಿದ್ಯಾರ್ಥಿ ಪರಿಷತ್ ಆಗ್ರಹಿಸಿದೆ.

ವಿದ್ಯಾರ್ಥಿಗಳ ಹಿತಾಸಕ್ತಿ, ಸಾಮಾಜಿಕ ನ್ಯಾಯ ಹಾಗೂ ಗುಣಮಟ್ಟದ ಶಿಕ್ಷಣಕ್ಕಾಗಿ ದಲಿತ ವಿದ್ಯಾರ್ಥಿ ಪರಿಷತ್ ಮುಂದೆಯೂ ತನ್ನ ಹೋರಾಟವನ್ನು ನಿರಂತರವಾಗಿ ಮುಂದುವರಿಸಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಕೆಸರಟ್ಟಿ - ಕಲಕೇರಿ ಮಾರ್ಗದ ಹದಗೆಟ್ಟಿರುವ ರಸ್ತೆ ದುರಸ್ಥಿಗೆ ಆಗ್ರಹಿಸಿ ನಡೆದ ಧರಣಿ।

### ಸ್ಥಳಕ್ಕೆ ಭೇಟಿ ನೀಡಿದ ಶಾಸಕ ರಾಜುಗೌಡರಿಗೆ ಧರಣಿ ನಿರತರಿಂದ ಮನವಿ

## ಶಾಸಕರ ಭರವಸೆ ಮೇರೆಗೆ ಧರಣಿ ಸತ್ಯಾಗ್ರಹ ಅಂತ್ಯ

■ ಉದಯರಶ್ಮಿ ದಿನಪತ್ರಿಕೆ




ತಾಳಿಕೋಟೆ: ತಾಲೂಕಿನ ಕೆಸರಟ್ಟಿ ಕ್ರಾಸ್‌ದಿಂದ ಬಿಂಜಲಭಾವಿ ಮಾರ್ಗವಾಗಿ ಕಲಕೇರಿ ಸಂಪರ್ಕಿಸುವ ಮುಖ್ಯ ರಸ್ತೆಯು ಸಂಪೂರ್ಣ ಹಾಳಾಗಿ ಹೋಗಿದ್ದು ಕೂಡಲೇ ನೂತನ ರಸ್ತೆ ನಿರ್ಮಿಸಬೇಕೆಂದು ರಾಷ್ಟ್ರೀಯ ರೈತ ಸಂಘ ಜಿಲ್ಲಾ ಹಾಗೂ ತಾಲೂಕಾ ಮತ್ತು ಗ್ರಾಮ ಘಟಕದ ನೇತೃತ್ವದಲ್ಲಿ ಕಳೆದ 3 ದಿನಗಳಿಂದ ಬಿಂಜಲಭಾವಿ ಗ್ರಾಮದ ಹತ್ತಿರ ನಡೆದ ಧರಣಿ ಸತ್ಯಾಗ್ರಹವು ಶಾಸಕ ರಾಜುಗೌಡ ಪಾಟೀಲ(ಕು.ಸಾಲವಾಡಗಿ) ಅವರ ಬರವಸೆಯ ಮೇರೆಗೆ ಅಂತ್ಯಗೊಂಡಿದೆ.

ಶುಕ್ರವಾರರಂದು ಧರಣಿ ನಿರತರ ಸ್ಥಳಕ್ಕೆ ಬೆಟ್ಟಿ ನೀಡಿದ ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ ಅವರು ಮಾತನಾಡಿ, ಸದರಿ ರಸ್ತೆ ದುರಸ್ಥಿಗಾಗಿ 2024 ನವ್ಹೆಂಬರ್ ನಲ್ಲಿ 5 ಕೋಟಿ ರೂ. ಲೋಕೋಪಯೋಗಿ ಇಲಾಖೆಯಡಿ ಹಾಕಲಾಗಿ–ತ್ತು ಯಾವುದೋ ಕಾರಣಕ್ಕೆ ಕೆಲವರ ಸ್ವಹಿತಾಸಕ್ತಿಗೆ ಸದರಿ ಕೆಲಸವು ಪ್ರಾರಂಭಗೊಳ್ಳದೇ ರದ್ದುಗೊಂಡಿತು. ಸದರಿ ರಸ್ತೆಗೆ ದುರಸ್ಥಿಗೆ ಬಂದ ಅನುದಾನ ಬೇರೆಡೆ ಹೋಯಿತು. ಈಗ ರಸ್ತೆ ದುರಸ್ಥಿಗೆ ಎಲ್ಲರ ಅಪೇಕ್ಷೆಯಂತೆ ಕೂಡಲೇ ತಾತ್ಕಾಲಿಕವಾಗಿ ಗರ್ಸು ಮಿಶ್ರೀಮ ಮರ್ಮು ರಸ್ತೆಯನ್ನು ಮಾಡಿಕೊಡಿಕೊಡಲು ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಈ ರಸ್ತೆ ಡಾಂಬರಿಕರಣ ಮಾಡುವದಕ್ಕಾಗಿ ಅನುದಾನಕ್ಕಾಗಿ ಸರ್ಕಾರ ಮಟ್ಟದಲ್ಲಿ ಪ್ರಸ್ತಾವನೆ ಸಲ್ಲಿಸಿದ್ದೇನೆ. ಆದಷ್ಟು ಬೇಗನೇ ಸರ್ಕಾರದಿಂದ ಮಂಜೂರಾತಿ ದೊರೆತ ತಕ್ಷಣವೇ ಢಾಂಬರಿಕರಣ ಮಾಡಿಕೊಡಲಾಗುವದೆಂದು ಧರಣಿ ನಿರತರಿಗೆ ಭರವಸೆ ನೀಡಿದರು. ಶಾಸಕ ರಾಜುಗೌಡ ಪಾಟೀಲ ಅವರ ಭರವಸೆಯ ಮೇರೆಗೆ ಧರಣಿ ನಿರತರು ಆದಷ್ಟು ಬೇಗನೇ ರಸ್ತೆ ಕಾಮಗಾರಿ ಮಾಡಿಕೊಟ್ಟರೆ ರೈತಾಪಿ ಜನತೆಗೆ ಹಾಗೂ ವಾಹನ ಸವಾರರಿಗೆ ಅನುಕೂಲವಾಗಲಿದೆ ಎಂದರಲ್ಲದೇ, ಕೂಡಲೇ ರಸ್ತೆ ದುರಸ್ಥಿಗೆ ಗರ್ಸು ಮರ್ಮು ಕೆಲಸಕ್ಕೆ ಕ್ರಮಕೈಗೊಂಡಿದ್ದಕ್ಕೆ ಸ್ವಾಗತಿಸಿದರಲ್ಲದೇ ಧರಣಿ ಸತ್ಯಾಗ್ರಹವನ್ನು ಹಿಂಪಡೆದುಕೊಳ್ಳುವದಾಗಿ ತಿಳಿಸಿದರು.

ರಾಷ್ಟ್ರೀಯ ರೈತ ಸಂಘದ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಹಣಮಂತ ವಡ್ಡರ ಅವರು ಕೂಡಲೇ ರಸ್ತೆ ದುರಸ್ಥಿ ಮಾಡಿಕೊಡಬೇಕೆಂದು ಶಾಸಕ ರಾಜುಗೌಡ ಅವರಿಗೆ ಮನವಿ ಸಲ್ಲಿಸಿದರು.

ಈ ಸಮಯದಲ್ಲಿ ತಹಶಿಲ್ದಾರ ಶ್ರೀಮತಿ ಡಾ.ವಿನಯಾ ಹೂಗಾರ, ಪಿಡಬ್ಲುಡಿ ಅಧಿಕಾರಿ ಅರುಣಕುಮಾರ, ಜೆಡಿ–ಎಸ್ ತಾಲೂಕಾ ಅಧ್ಯಕ್ಷ ಮಡುಸಾಹುಕಾರ ಬಿರಾದಾರ, ಜಿಲ್ಲಾ ಉಪಾಧ್ಯಕ್ಷ ಮೈಹಿಬೂಬಾಷಾ ಮನಗೂಳಿ, ರಾಜ್ಯ ಮಹಿಳಾ ಪ್ರಧಾನ ಕಾರ್ಯದರ್ಶಿ ರೇಣುಕಾ ಪಾಟೀಲ, ತಾಲೂಕಾ ಅಧ್ಯಕ್ಷ ಅಶೋಕಗೌಡ ಪಾಟೀಲ, ತಾಲೂಕಾ ಯುವ ಮೂರ್ಚಾ ಅಧ್ಯಕ್ಷ ಗೌಡಪ್ಪಗೌಡ ಹಳಿಮನಿ ಅಸ್ಕಿ, ತಾಲೂಕಾ ಪ್ರಧಾನ ಕಾರ್ಯದರ್ಶಿ ಶರಣು ಕೌದಿ, ಗ್ರಾಮ ಘಟಕದ ಅಧ್ಯಕ್ಷ ವಿಜಯಕುಮಾರ ಉಕ್ಕಲಿ, ಕೆಸರಟ್ಟಿ ಗ್ರಾಮದ ಮುಖಂಡರಾದ ರಾಮನಗೌಡ ಪಾಟೀಲ, ಬಸನಗೌಡ ಬಿರಾದಾರ, ಗುರುನಾಥಗೌಡ ಪಾಟೀಲ, ಬಿಂಜಲಭಾವಿ ಗ್ರಾಮದ ಮುಖಂಡರುಗಳಾದ ಸಿದ್ದಣ್ಣ ಅಸ್ಕಿ, ಮಲಕನಗೌಡ ಬಿರಾದಾರ, ಸಾಯಬಣ್ಣ ಉಕ್ಕಲಿ, ಬಸಯ್ಯ ಹಿರೇಮಠ, ಶಾಂತಗೌಡ ಬಿರಾದಾರ, ಮಹ್ಮದಲಿ ಮಕಾಂದಾರ, ಚನ್ನಾರೆಡ್ಡಿಗೌಡ ಬಿರಾದಾರ, ಒಳಗೊಂಡು ಮೊದಲಾದವರು ಉಪಸ್ಥಿತರಿದ್ದರು.

## 210 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಕಲಬುರಗಿ : ಕರುನಾಡ ವಿಜಯಸೇನೆ ಕಲಬುರಗಿ ಜಿಲ್ಲಾ ಘಟಕದ ವತಿಯಿಂದ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡಿದ 210 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶನಿವಾರ ನಗರದ ಡಾ. ಎಸ್. ಎಂ. ಪಂಡಿತ ರಂಗಮಂದಿರದಲ್ಲಿ ಅದ್ದೂರಿಯಾಗಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಸಲಾಯಿತು.

ಕಾರ್ಯಕ್ರಮವನ್ನು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಉದ್ಘಾಟಿಸಿ, ವಿದ್ಯಾರ್ಥಿಗಳು ಶೈಕ್ಷಣಿಕ ಸಾಧನೆಯ ಜೊತೆಗೆ ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಂಡು ಸಮಾಜಕ್ಕೆ ಮಾದರಿಯಾಗಬೇಕು ಎಂದು ಕರೆ ನೀಡಿದರು.

ಸಮಾಜ ಸೇವಕ ಡಾ. ಫಾರೂಕ್ ಮನ್ನೂರ್ ಹಾಗೂ ಕಾಂಗ್ರೆಸ್ ಮುಖಂಡ ನೀಲಕಂಠರಾವ್ ಮೂಲಗೆ ಮಾತನಾಡಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವುದರ ಜೊತೆಗೆ ಶಿಕ್ಷಣದ ಬಗ್ಗೆ ಮತ್ತಷ್ಟು ಆಸಕ್ತಿ ಮೂಡಿಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪರಮಪೂಜ್ಯ ಶ್ರೀ ಶ್ರೀ ಶ್ರೀ ಅಭಿನವ ಬಾಲಯೋಗಿ ಶರಣ ಶಂಕರಲಿಂಗ ಮಹಾರಾಜರು ಹಾಗೂ ಪರಮಪೂಜ್ಯ ಶ್ರೀ ಮಲ್ಲಯ್ಯ ಅಪ್ಪಾಜಿ ತಾಡತೆಗನೂರು ವಹಿಸಿದ್ದರು. ಕರುನಾಡ ವಿಜಯಸೇನೆ ಸಂಸ್ಥಾಪಕ ಹಾಗೂ ರಾಜ್ಯಾಧ್ಯಕ್ಷ ಹೆಚ್.ಎನ್. ದೀಪಕ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ಸಂಸ್ಥೆ ಮುಂದೆಯೂ ನಿರಂತರವಾಗಿ ಮುಂದುವರಿಸಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ನೇತೃತ್ವವನ್ನು ರಾಜ್ಯ ಯುವ ಘಟಕದ ಅಧ್ಯಕ್ಷ ಆರ್.ಎಸ್. ಮಹೇಶ್ ವಹಿಸಿದ್ದರು. ಮಹಿಳಾ ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಲತಾ ರವಿ ರಾಠೋಡ್, ರಮೇಶ ಹೆಚ್. ವಾಡೇಕರ್, ಡಾ. ರಾಜಕುಮಾರ ಪಾಟೀಲ, ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಪೃಥ್ವಿರಾಜ ಎಸ್. ರಾಂಪುರ ಸೇರಿದಂತೆ ಸೇನೆಯ ಕಾರ್ಯಕರ್ತರು, ಅನೇಕ ಗಣ್ಯರು ಉಪಸ್ಥಿತರಿದ್ದರು.ಈ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಸುಮಾರು 210 ಎಸ್‌ಎಸ್‌ಎಲಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳನ್ನು ಪ್ರಶಸ್ತಿ ಪತ್ರ, ಗೌರವ ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು. ಕಾರ್ಯಕ್ರಮದ ವಿದ್ಯಾರ್ಥಿಗಳು, ಪಾಲಕರು, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾದರು.

# ಪಾರದರ್ಶಕ, ಸುಸೂತ್ರ ಪರೀಕ್ಷೆಗೆ ಸಿದ್ಧತೆ ಮಾಡಿಕೊಳ್ಳಿ : ಡಿಸಿ



■ ಉದಯರಶ್ಮಿ ದಿನಪತ್ರಿಕೆ

## ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆ ಲಿಖಿತ ಪರೀಕ್ಷೆ। ಆ.2 ರಂದು ಜಿಲ್ಲೆಯ 61 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ। 24,434 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ

ವಿಜಯಪುರ: ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ವೃಂದದ ನಾಗರಿಕ (ಸಿವಿಲ್) ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಯ ಲಿಖಿತ ಪರೀಕ್ಷೆಯನ್ನು ಪಾರದರ್ಶಕ ಹಾಗೂ ಶಿಸ್ತು ಬದ್ಧವಾಗಿ ನಡೆಸುವ ನಿಟ್ಟಿನಲ್ಲಿ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ವಿ.ಬಿ.ದರಬಾರ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ಆಯೋಜಿಸಲಾಗಿದ್ದ ಪರೀಕ್ಷೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಒಟ್ಟು 61 ಪರೀಕ್ಷಾ ಕೇಂದ್ರಗಳಲ್ಲಿಯೂ ಯಾವುದೇ ರೀತಿಯ ಲೋಪದೋಷಗಳಿಲ್ಲದೆ ಈ ಪರೀಕ್ಷೆಗಳು ಸುಸೂತ್ರವಾಗಿ ನಡೆಯುವ ನಿಟ್ಟಿನಲ್ಲಿ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಎಂದರು.

ಆಗಸ್ಟ್ 02,2026 ರಂದು ಬೆಳಿಗ್ಗೆ 10:30 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಈ ಲಿಖಿತ ಪರೀಕ್ಷೆ ನಡೆಯಲಿದ್ದು, ಈ ಪರೀಕ್ಷೆಗೆ ಒಟ್ಟು 24,434 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದಾರೆ. ವಿಜಯಪುರ ನಗರ ವ್ಯಾಪ್ತಿಯ 55 ಕೇಂದ್ರಗಳಲ್ಲಿ 21,993 ಅಭ್ಯರ್ಥಿಗಳು, ಕವಲಗಿಯ 02 ಕೇಂದ್ರಗಳಲ್ಲಿ 857 ಅಭ್ಯರ್ಥಿಗಳು, ತಿಕೋಟಾದ 03 ಕೇಂದ್ರಗಳಲ್ಲಿ 1,080 ಅಭ್ಯರ್ಥಿಗಳು ಹಾಗೂ ತಿಡಗುಂದಿ 01 ಕೇಂದ್ರದಲ್ಲಿ 504 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ.

ಪರೀಕ್ಷಾ ಕಾರ್ಯವನ್ನು ವ್ಯವಸ್ಥಿತವಾಗಿ ನಿರ್ವಹಿಸಲು 20 ಮಾರ್ಗಾಧಿಕಾರಿ ತಂಡವನ್ನು ನೇಮಿಸಲಾಗಿದ್ದು, ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬರಂತೆ ಒಟ್ಟು 61 ವೀಕ್ಷಕರನ್ನು ಹಾಗೂ ಉಪ ಮುಖ್ಯ ಅಧೀಕ್ಷಕರು, ಪ್ರಶ್ನೆಪತ್ರಿಕೆ ಪಾಲಕರು ಮತ್ತು ವಿಶೇಷ ಸ್ಕ್ವಾಡ್ ಸದಸ್ಯರನ್ನು ನಿಯೋಜಿಸಲಾಗಿದೆ ಎಂದರು.

ಪರೀಕ್ಷೆಗೆ ಸಂಬಂಧಿಸಿದ ಗೌಪ್ಯ ಸಾಮಗ್ರಿಗಳ ಸುರಕ್ಷಿತ ಸಾಗಾಣಿಕೆಗಾಗಿ ಅಪರ ಜಿಲ್ಲಾಧಿಕಾರಿಗಳು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ ಎಂದರು.

ಪರೀಕ್ಷಾ ಕೇಂದ್ರಗಳಲ್ಲಿ ಬೆಳಕು, ಶೌಚಾಲಯ ವ್ಯವಸ್ಥೆ, ಕುಡಿಯುವ ನೀರಿನಂತಹ ಸೌಕರ್ಯ ಹೊಂದಿರುವುದನ್ನು ಖಚಿತಪಡಿಸಿಕೊಳ್ಳಿ.. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಕೆ ಕಡ್ಡಾಯಗೊಳಿಸಲಾಗಿದ್ದು, ಬಯೋಮೆಟ್ರಿಕ್, ಕ್ಯೂಆರ್ ಕೋಡ್ ಸ್ಕ್ಯಾನಿಂಗ್ ಹಾಗೂ ಮೆಟಲ್ ಡಿಟೆಕ್ಟರ್ ಮೂಲಕ ಪರೀಕ್ಷಾರ್ಥಿಗಳನ್ನು ಸಂಪೂರ್ಣ ತಪಾಸಣೆಗೆ ಒಳಪಡಿಸಲು ಸೂಚಿಸಲಾಗಿದೆ ಎಂದರು.

ಪರೀಕ್ಷಾ ದಿನದಂದು ಸಾರಿಗೆ ವ್ಯವಸ್ಥೆ ಮತ್ತು ತಡೆರಹಿತ ವಿದ್ಯುತ್ ಪೂರೈಕೆಗೆ ಸಂಬಂಧಪಟ್ಟ ಇಲಾಖೆಗೆ ಸೂಚಿಸಲಾಯಿತು. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರವನ್ನು ಕಡ್ಡಾಯವಾಗಿ ತರತಕ್ಕದ್ದು. ಪರೀಕ್ಷಾ ಕೊಠಡಿಯೊಳಗೆ ಮೊಬೈಲ್ ಫೋನ್, ಬ್ಲೂಟೂತ್, ಇಯರ್ ಫೋನ್, ಕ್ಯಾಲ್ಕುಲೇಟರ್, ಸ್ಮಾರ್ಟ್ ವಾಚ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಸಾಧನಗಳು, ಪೆನ್ ಡ್ರೈವ್, ತಿನಿಸುಗಳು, ನೀರಿನ ಬಾಟಲಿ, ಕಾಗದ, ಲಾಗ್ ಟೇಬಲ್ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಪರೀಕ್ಷಾ ಕೊಠಡಿಯೊಳಗೆ ಮುಖ ಮುಚ್ಚುವ ಮಾಸ್ಕ್ ಧರಿಸಲು ಅವಕಾಶವಿರುವುದಿಲ್ಲ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಪೊಲೀಸ್ ಇಲಾಖೆಯು ಸುಸೂತ್ರ ಪರೀಕ್ಷೆ ನಡೆಸಲು ಜಿಲ್ಲಾಡಳಿತಕ್ಕೆ ಭದ್ರತೆ ಕೈಗೊಳ್ಳಲು ಸೂಚಿಸಲಾಯಿತು. ಪರೀಕ್ಷೆ ಸಂದರ್ಭದಲ್ಲಿ ಯಾವುದೇ ಸಮಸ್ಯೆಯಾಗದಂತೆ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸುವ ನಿಟ್ಟಿನಲ್ಲಿ ಪರೀಕ್ಷಾ ಪ್ರಾಧಿಕಾರ ಹೊರಡಿಸಿರುವ ನಿಯಮಾನುಸಾರ ಅಗತ್ಯ ಕ್ರಮವಹಿಸಬೇಕು. ಯಾವುದೇ ಅಹಿತಕರ ಘಟನೆ ನಡೆಯದಂತೆ ಪರೀಕ್ಷೆ ನಡೆಸಬೇಕು ಎಂದರು.

ಪರೀಕ್ಷಾ ಕಾರ್ಯದಲ್ಲಿ ತೊಡಗುವ ಅಧಿಕಾರಿಗಳು ಮತ್ತು ಸಿಬ್ಬಂದಿ ಯಾವುದೇ ಕಾರಣಕ್ಕೂ ಪರೀಕ್ಷೆಯನ್ನು ಅತ್ಯಂತ ಜವಾಬ್ದಾರಿಯಿಂದ ಹಾಗೂ ಜಾಗರೂಕತೆಯಿಂದ ನಿರ್ವಹಿಸಬೇಕು. ಯಾವುದೇ ಸಮಸ್ಯೆ ಕಂಡುಬಂದಲ್ಲಿ ಅಂತಹವರ ವಿರುದ್ಧ ಕಾನೂನು ರೀತ್ಯ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ, ಹೆಸ್ಕಾಂನ ಅಧೀಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ, ಖಜಾನೆ ಇಲಾಖೆಯ ಉಪ ನಿರ್ದೇಶಕರಾದ ಆನಂದ ಮುಚ್ಚಂಡಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೆ.ಎ.ಉಪ್ಪಾರ, ಖಜಾನೆ ಇಲಾಖೆಯ ಉಪ ನಿರ್ದೇಶಕರಾದ ಆನಂದ ಮುಚ್ಚಂಡಿ, ಕೆಕೆ ಆರ್ ಟಿಸಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ದೇವಾನಂದ ಬಿರಾದಾರ, ಸೇರಿದಂತೆ ಪರೀಕ್ಷೆಗೆ ನಿಯೋಜಿತ ಅಧಿಕಾರಿ ಸಿಬ್ಬಂದಿ ಉಪಸ್ಥಿತರಿದ್ದರು.

### ಪರೀಕ್ಷಾ ನಿಯಮಗಳನ್ವಯ ಕಾರ್ಯ ನಿರ್ವಹಿಸಿ : ಎಸ್ಪಿ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಅವರು ಮಾತನಾಡಿ, ಜಿಲ್ಲೆಯಲ್ಲಿ ನಡೆಯುವ ಈ ಪರೀಕ್ಷೆಯನ್ನು ಅತ್ಯಂತ ಜಾಗರೂಕತೆಯಿಂದ ನಡೆಸಲು ಶ್ರಮಿಸಿ ಎಂದು ಪರೀಕ್ಷೆಗೆ ನಿಯೋಜಿತ ಅಧಿಕಾರಿಗಳಿಗೆ ಸೂಚಿಸಿದರು.

ನಮ್ಮೆಲ್ಲರ ಮೇಲೆ ಬಹು ದೊಡ್ಡ ಜವಾಬ್ದಾರಿ ಇದೆ. ಪರೀಕ್ಷಾ ನಿಯಮಗಳನ್ವಯ ಕಾರ್ಯ ನಿರ್ವಹಿಸಿ ಅಭ್ಯರ್ಥಿಗಳ ಡ್ರೆಸ್ ಕೋಡ್ ಬಗ್ಗೆ ಗಮನಹರಿಸಬೇಕು ಎಂದರು.

# ನಮ್ಮ ಬೆಳೆಗಳಿಗೆ ನೀರು ಕೊಡದೆ ತೆಲಂಗಾಣಕ್ಕೆ ನೀರು ಹರಿಕೆ

■ ಉದಯರಶ್ಮಿ ದಿನಪತ್ರಿಕೆ



ಆಲಮಟ್ಟಿ: ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯ ಭರ್ತಿಯತ್ತ ಸಾಗುತ್ತಿದ್ದರೂ ವಿಜಯಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿ ಬೆಳೆದ ಮುಂಗಾರು ಬೆಳೆಗಳಿಗೆ ನೀರು ನೀಡದೆ, ನದಿ ಪಾತ್ರದ ಮೂಲಕ ಸಾವಿರಾರು ಕ್ಯೂಸೆಕ್ ನೀರನ್ನು ನಾರಾಯಣಪುರಕ್ಕೆ ಹರಿಸಲಾಗುತ್ತಿದೆ. ನಾರಾಯಣಪುರ ಜಲಾಶಯದಿಂದ ಕಳೆದ 3–4 ದಿನಗಳಿಂದ ಪ್ರತಿದಿನ 40 ಸಾವಿರ ಕ್ಯೂಸೆಕ್ ನೀರನ್ನು ನದಿ ಪಾತ್ರದ ಮೂಲಕ ತೆಲಂಗಾಣ ರಾಜ್ಯಕ್ಕೆ ಹರಿಸಲಾಗುತ್ತಿದೆ ಎಂದು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ರಾಜ್ಯ ಸರ್ಕಾರದ ವಿರುದ್ಧ ಆರೋಪಿಸಿ ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾ ಪ್ರಕಟಣೆ ನೀಡಿದ ಅವರು, "ಮಹಾರಾಷ್ಟ್ರದ ಪಶ್ಚಿಮ ಘಟ್ಟದಲ್ಲಿ ನಿರಂತರ ಮಳೆಯಿಂದ ಆಲಮಟ್ಟಿ ಜಲಾಶಯಕ್ಕೆ ಅಪಾರ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ. ಪ್ರಸ್ತುತ ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯದಲ್ಲಿ ಒಟ್ಟು 114.896 ಟಿಎಂಸಿ ನೀರು ಸಂಗ್ರಹವಿದೆ. ಅದರಲ್ಲಿ ಬಳಕೆಗೆ ನಿರ್ಬಂಧದ 17 ಟಿಎಂಸಿ ನೀರು ಹೊರತುಪಡಿಸಿ 97.386 ಟಿಎಂಸಿ ನೀರು ಬಳಕೆಗೆ ಲಭ್ಯವಿದೆ. ಮಹಾರಾಷ್ಟ್ರ ವ್ಯಾಪ್ತಿಯಲ್ಲಿ ಇನ್ನೂ ನಿರಂತರವಾಗಿ ಮಳೆಯಾಗುತ್ತಿದೆ. ಜಲಾಶಯ ಬಹುತೇಕ ಭರ್ತಿಯಾಗಿದೆ" ಎಂದರು.

"ಜಲಾಶಯ ಭರ್ತಿಯಾಗುತ್ತಿದ್ದರೂ ಅವಳಿ ಜಿಲ್ಲೆಯ ಕೃಷಿಗೆ ನೀರು ಹರಿಸುತ್ತಿಲ್ಲ. ನಮ್ಮ ರೈತರು ಬೆಳೆದ ಬೆಳೆಗಳಿಗೆ ನೀರು ಕೊಡದೆ ಆಲಮಟ್ಟಿ ಆಣೆಕಟ್ಟಿನ 14 ಗೇಟ್‌ಗಳ ಮುಖಾಂತರ ನದಿ ಪಾತ್ರಕ್ಕೆ ನೀರು ಹರಿಸಲಾಗುತ್ತಿದೆ. ಅತ್ತ ನಾರಾಯಣಪುರ ಜಲಾಶಯದಿಂದಲೂ ನದಿ ಪಾತ್ರಕ್ಕೆ ನೀರು ಹರಿಸಿ ತೆಲಂಗಾಣ ರಾಜ್ಯಕ್ಕೆ ನೀರು ಕೊಡಲಾಗುತ್ತಿದೆ.


ಮುಂಗಾರು ಹಂಗಾಮಿನಲ್ಲಿ 7 ಟಿಎಂಸಿ ಹಾಗೂ ಹಿಂಗಾರು ಹಂಗಾಮಿಗೆ 8 ಟಿಎಂಸಿ ನೀರನ್ನು ಕೃಷಿಗೆ ಕೊಡಬೇಕೆಂಬ ನಿಯಮವಿದ್ದರೂ ನಮ್ಮ ರೈತರಿಗೆ ನೀರು ಕೊಡದೆ ವಂಚಿಸಲಾಗುತ್ತಿದೆ. ಮೊದಲೇ ಬರಗಾಲದಿಂದ ಅವಳಿ ಜಿಲ್ಲೆಯ ರೈತರು ಬಸವಳಿದಿದ್ದಾರೆ. ಕಳೆದ ವರ್ಷವೂ ಮುಂಗಾರು ಹಂಗಾಮಿನಲ್ಲಿ ವಿಪರೀತ ಮಳೆಯಾಗಿ ಬೆಳೆದ ಬೆಳೆ ನೀರಿನಲ್ಲಿ ಕೊಳೆತು, ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿತ್ತು" ಎಂದು ಹೇಳಿದರು.

"ಈ ವರ್ಷವಾದರೂ ಮುಂಗಾರು ಮಳೆ ಸಮರ್ಪಕವಾಗಿ ಆಗುತ್ತದೆ ಎಂಬ ಭರವಸೆ ಇಟ್ಟುಕೊಂಡ ರೈತರು ಅಲ್ಪ–ಸ್ವಲ್ಪ ಮಳೆ ಆದ ಕಾರಣ ಮುಂಗಾರು ಬಿತ್ತನೆ ಮಾಡಿದ್ದಾರೆ. ನಂತರ ಸಂಪೂರ್ಣ ಮಳೆ ಕೈಕೊಟ್ಟಿದ್ದರಿಂದ ಮೊಳಕೆಯಲ್ಲಿಯೇ ಬೆಳೆ ಕಮರಿಹೋಗಿವೆ. ಇದರಿಂದ ರೈತರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ. ಆಣೆಕಟ್ಟು ನಿರ್ಮಾಣಕ್ಕೆ ಭೂಮಿ ತ್ಯಾಗ ಮಾಡಿದ ರೈತರಿಗೆ ಬೆಲೆ ಇಲ್ಲದಂತಾಗಿದೆ" ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಈಗಲಾದರೂ ಸರ್ಕಾರ ಎಚ್ಚೆತ್ತುಕೊಂಡು ಕೂಡಲೇ ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯದ ವ್ಯಾಪ್ತಿಗೆ ಬರುವ ಎಲ್ಲಾ ಕಾಲುವೆಗಳಿಗೆ ನೀರು ಹರಿಸಿ ಮುಂಗಾರು ಬೆಳೆಗಳಿಗೆ ಅನುಕೂಲ ಮಾಡಿಕೊಡಬೇಕೆಂದು ಅರವಿಂದ ಕುಲಕರ್ಣಿ ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

# ಏಕಾಏಕಿ ಸ್ಫೋಟಗೊಂಡು ಸಂಪೂರ್ಣ ಛಿದ್ರವಾದ ಕಾರು!

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ (ಜಮಖಂಡಿ): ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ತಡರಾತ್ರಿ ನಿಲ್ಲಿಸಿದ್ದ ಮಹೀಂದ್ರ ಎಕ್ಸ್ಯುವಿ (ಫಿಗಗಿ300) ಕಾರು ಏಕಾಏಕಿ ಭಾರೀ ಸ್ಫೋಟಗೊಂಡು ಸಂಪೂರ್ಣ ಛಿದ್ರಛಿದ್ರವಾದ ಘಟನೆ ನಡೆದಿದೆ. ಸ್ಫೋಟದ ತೀವ್ರತೆಗೆ ಕಾರಿನ ಭಾಗಗಳು ಸುತ್ತಮುತ್ತಲಿನ ಪ್ರದೇಶಕ್ಕೆ ಚದುರಿಬಿದ್ದಿದ್ದು, ಎಂಜಿನ್ ಸಹ ತುಂಡು–ತುಂಡಾಗಿರುವುದು ಕಂಡುಬಂದಿದೆ. ಅದೃಷ್ಟವಶಾತ್ ಕಾರಿನ ಮಾಲೀಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಸ್ಫೋಟಗೊಂಡ ವಾಹನವು ಹಿಪ್ಪರಗಿ ಗ್ರಾಮದ ಜಯಶ್ರೀ ಹಣಮಂತ ಅಥಣಿ ಅವರ ಹೆಸರಿನಲ್ಲಿರುವ ಫಿಗಗಿ300 ಕಾರು ಎಂದು ತಿಳಿದುಬಂದಿದೆ. ಸುಮಾರು ಮೂರು ವರ್ಷಗಳ ಹಿಂದೆ ವೈನ್ ಶಾಪ್ ನಡೆಸುತ್ತಿರುವ ಹನುಮಂತ ಅಥಣಿ ಅವರು ತಮ್ಮ ಪತ್ನಿಯ ಹೆಸರಿನಲ್ಲಿ ಈ ವಾಹನವನ್ನು ಖರೀದಿಸಿದ್ದರು.

ಘಟನೆ ಕುರಿತು ಮಾಹಿತಿ ನೀಡಿದ ಕಾರಿನ ಮಾಲೀಕ ಹನುಮಂತ ಅಥಣಿ, "ನಮ್ಮ ಊರು ರಬಕವಿ. ಶನಿವಾರ ಸುಮಾರು 4.30 ಗಂಟೆಗೆ ಹಿಪ್ಪರಗಿಯ ಬಾರ್ ಬಳಿ ಕಾರು ನಿಲ್ಲಿಸಿದ್ದೆ. ರಾತ್ರಿ ಸುಮಾರು 10.45ರ ವೇಳೆಗೆ ಬಾರ್‌ನ ಲೆಕ್ಕಪತ್ರ ಹಾಗೂ ಹಣದ ವ್ಯವಹಾರ ಮುಗಿಸಿಕೊಂಡು ಹೊರಬರುತ್ತಿದ್ದಾಗ ಏಕಾಏಕಿ ಭಾರೀ ಸ್ಫೋಟದ ಶಬ್ದ ಕೇಳಿಸಿತು. ಓಡಿ ಹೋಗಿ ನೋಡಿದಾಗ ಕಾರು ಸಂಪೂರ್ಣವಾಗಿ ಛಿದ್ರಛಿದ್ರವಾಗಿತ್ತು. ಸ್ಫೋಟದ ತೀವ್ರತೆಗೆ ಕಾರಿನ ಕೆಲವು ಭಾಗಗಳು ಬಹಳ ದೂರಕ್ಕೆ ಹಾರಿ ಬಿದ್ದಿದ್ದವು. ಎಂಜಿನ್ ಕೂಡ ಪೀಸ್–ಪೀಸ್ ಆಗಿದೆ. ಈ ಸ್ಫೋಟಕ್ಕೆ ಕಾರಣವೇನು ಎಂಬುದನ್ನು ಪೊಲೀಸರು ಸಮಗ್ರ ತನಿಖೆ ನಡೆಸಿ ಪತ್ತೆಹಚ್ಚಬೇಕು" ಎಂದು ಆಗ್ರಹಿಸಿದರು.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಪೊಲೀಸ್ ಅಧಿಕಾರಿಗಳು ಧಾವಿಸಿ ಪರಿಶೀಲನೆ ನಡೆಸಿದರು. ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ಬಾಗಲಕೋಟೆ ಹಾಗೂ ಬೆಳಗಾವಿಯಿಂದ ಬಾಂಬ್ ನಿಷ್ಕ್ರಿಯ ದಳ (ಃಂಟಭ ಆಜಣಜಭಿಣಉಂಟ ಚಿಟಜ ಖು–ಠಿಆಚಿಟ ಖಡಣಾಚಿಜ) ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹಿರಿಯ ಪೊಲೀಸ್ ಅಧಿಕಾರಿಗಳೂ ಘಟನಾ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿ ತನಿಖೆಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಸದ್ಯ ಕಾರು ಸ್ಫೋಟಕ್ಕೆ ನಿಖರ ಕಾರಣವೇನು ಎಂಬುದು ಇನ್ನೂ ತಿಳಿದುಬಂದಿಲ್ಲ. ತಾಂತ್ರಿಕ ದೋಷ, ಸ್ಫೋಟಕ ವಸ್ತು ಅಥವಾ ಇತರೆ ಯಾವುದೇ ಕಾರಣಗಳಿವೆಯೇ ಎಂಬ ಎಲ್ಲ ಆಯಾಮಗಳಲ್ಲಿ ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ ಹಾಗೂ ಬಾಂಬ್ ನಿಷ್ಕ್ರಿಯ ದಳದ ಪರಿಶೀಲನೆ ಬಳಿಕವೇ ಸ್ಫೋಟದ ನಿಖರ ಕಾರಣ ಬಹಿರಂಗವಾಗುವ ಸಾಧ್ಯತೆ ಇದೆ.

ಈ ಘಟನೆ ಹಿಪ್ಪರಗಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ಆತಂಕದ ವಾತಾವರಣ ನಿರ್ಮಿಸಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆಯನ್ನು ಮುಂದುವರಿಸಿದ್ದಾರೆ.

# ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ : ಶಾಸಕ ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕರ್ನಾಟಕ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಜಾರಿಗೆ ತಂದಿರುವ ರೈಸ್, ಬೇಡ ಬ್ರೋ ಅಭಿಯಾನ ಅತ್ಯಂತ ಶ್ಲಾಘನೀಯವಾಗಿದೆ. ಯುವಶಕ್ತಿಯು ಡ್ರಗ್ಸ್ ಅನ್ನು ತಿರಸ್ಕರಿಸಿ, ಮಾಹಿತಿ ನೀಡಿ ಸಂತ್ರಸ್ತರಿಗೆ ಬೆಂಬಲವಾಗಿ ಮತ್ತು ಸಮಾಜವನ್ನು ಸಬಲೀಕರಿಸುವ ಮೂಲಕ ಈ ಹೋರಾಟದಲ್ಲಿ ಸಕ್ರಿಯವಾಗಿ ಕೈಜೋಡಿಸಬೇಕು ಎಂದು ಶಾಸಕ ಅಶೋಕ ಮನಗೂಳಿ ಕರೆ ನೀಡಿದರು.

ನಗರದ ಎಚ್.ಜಿ.ಕಾಲೇಜಿನ ಸಭಾಭವನದಲ್ಲಿ ವಿಜಯಪುರ ಜಿಲ್ಲಾ ಪೊಲೀಸ್, ಇಂಡಿ ಉಪವಿಭಾಗ ಹಾಗೂ ಸಿಂದಗಿ ಪೊಲೀಸ್ ಠಾಣೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ರೈಸ್, ಬೇಡ ಬ್ರೋ ಡ್ರಗ್ಸ್ ಮುಕ್ತ ಅಭಿಯಾನದ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವ ಪೀಳಿಗೆಯು ಮಾದಕ ವ್ಯಸನವೆಂಬ ಸಾಮಾಜಿಕ ಪಿಡುಗಿಗೆ ಬಲಿಯಾಗದಂತೆ ತಡೆಯುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ, ಉತ್ತಮ ಮೌಲ್ಯಗಳನ್ನು ಬೆಳೆಸುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ. ಯುವಜನರು ಮಾದಕ ವ್ಯಸನದ ದುಷ್ಪರಿಣಾಮಗಳಿಂದ ದೂರವಿದ್ದು, ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ಸಕ್ರಿಯವಾಗಿ ಕೈಜೋಡಿಸಬೇಕು ಎಂದರು.

ಈ ವೇಳೆ ತಹಶೀಲ್ದಾರ ಕರೆಪ್ಪ ಬೆಳ್ಳಿ ಹಾಗೂ ಆರೋಗ್ಯ ಇಲಾಖೆಯ ಎಸ್.ಡಿ.ಕುಲಕರ್ಣಿ ಮಾತನಾಡಿ, ಕರ್ನಾಟಕ ರಾಜ್ಯವನ್ನು ವ್ಯಸನ ಮುಕ್ತ ರಾಜ್ಯವನ್ನಾಗಿ ಮಾಡಲು ಸರ್ಕಾರ ಈ ಕಾರ್ಯಕೈಗೊಂಡಿರುವುದು ಸಂತಸ ತಂದಿದೆ. ಇಂತಹ ಕಾರ್ಯಕ್ರಮಗಳಿಂದ ಅದೆಷ್ಟೋ ಯುವ ಜನಾಂಗ ಸುಂದರ ಬದುಕು ಕಟ್ಟಿಕೊಳ್ಳಲು ಸಹಾಯವಾಗುತ್ತದೆ. ದುಶ್ಚಟಗಳು ವ್ಯಕ್ತಿಯ ಬದುಕು, ಕುಟುಂಬ ಮಾತ್ರವಲ್ಲದೆ ಸಮಾಜದ ಮೇಲೂ ನೇರ ಪರಿಣಾಮ ಬೀರುತ್ತದೆ. ಮಾದಕ ವಸ್ತು ಸೇವನೆ ವ್ಯಕ್ತಿಯ ಮೆದುಳು, ದೈಹಿಕ, ಮಾನಸಿಕ ಆರೋಗ್ಯ ಹಾಗೂ ಸಾಮಾಜಿಕ ಬದುಕಿಗೂ ಮಾರಕವಾಗಿದೆ ಎಂದರು. ಕಾಲೇಜಿನ ಪ್ರಾಚಾರ್ಯ ಎ.ಆರ್.ಹೆಗ್ಗನದೊಡ್ಡಿ ಪ್ರತಿಜ್ಞಾ ವಿಧಿಯನ್ನು ಭೋದಿಸಿದರು.

ವೇದಿಕೆ ಮೇಲೆ ಆಲಮೇಲ ಗ್ಯಾರಂಟಿ ಯೋಜನೆಯ ಅಧ್ಯಕ್ಷ ಅಶೋಕ ಕೊಳಾರಿ, ರವಿರಾಜ ದೇವರಮನಿ, ಎಲೈಟ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮೈಬೂಬ ಅಸಂತಾಪೂರ, ರೋಹಿಣಿ ನ್ಯಾಮಗೊಡ ಇದ್ದರು. ಸಿಂದಗಿ ಸಿಪಿಆಯ್ ಸುನೀಲ ಮೂಲಿಮನಿ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು.

ಪಿಎಸ್‌ಆಯ್ ಶ್ರೀಕಾಂತ ಕಾಂಬಳೆ ವಂದಿಸಿದರು. ಉಪನ್ಯಾಸಕ ಸಿದ್ದಲಿಂಗ ಕಿಣಗಿ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಉಪನ್ಯಾಸಕರಾದ ಸತೀಶ ಪಾಟೀಲ, ಎಂ.ಎನ್.ಅಜ್ಜಪ್ಪ, ಶಾಂತೂ ಬಿರಾದಾರ, ಮುಕ್ತಾಯಕ್ಕ ಕತ್ತಿ, ಎಫ್.ಎ.ಹಾಲಪ್ಪನವರ, ಎ.ಆರ್.ಸಿಂದಗಿಕರ, ಎಸ್.ಎಸ್.ಚವ್ಹಾಣ, ಎ.ಬಿ.ಪಾಟೀಲ, ಗಂಗಾರಾಮ ಪವಾರ, ದೈಹಿಕ ಶಿಕ್ಷಣ ಉಪನ್ಯಾಸಕ ಸತೀಶ ಬಸರಕೋಡ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಕೈಗಾರಿಕಾ ವಲಯದಲ್ಲಿ ಭೂಮಿ, ಹಣ, ವಿದ್ಯುತ್ ಇದ್ದರೆ ಯಶಸ್ಸು ಸಾಧ್ಯ

■ ಉದಯರಶ್ಮಿ ದಿನಪತ್ರಿಕೆ



## ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಹೇಳಿಕೆ

ಇಂಡಿ:"ಕೈಗಾರಿಕಾ ವಲಯದಲ್ಲಿ ಭೂಮಿ, ಹಣ, ವಿದ್ಯುತ್ ಹಾಗೂ ಅಧಿಕಾರಿಗಳ ಸಹಕಾರವಿದ್ದರೆ ಮಾತ್ರ ಯಶಸ್ಸು ಸಾಧ್ಯ. ಕೈಗಾರಿಕೆಗಳನ್ನು ಸ್ಥಾಪಿಸಿ ನಡೆಸುವುದು ಅತ್ಯಂತ ಕಷ್ಟದ ಕೆಲಸ. ಇಂತಹ ಬರದ ನಾಡಿನಲ್ಲೂ ಸಾಕಷ್ಟು ಕಷ್ಟಪಟ್ಟು ಸಣ್ಣ ಕೈಗಾರಿಕೆಯನ್ನು ತೆಗೆದು, ಅತ್ಯಂತ ಯಶಸ್ವಿಯಾಗಿ ಇವತ್ತು ರಾಜ್ಯ ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷರಾಗಿರುವುದು ನಿಂಗಣ್ಣ ಬಿರಾದಾರ್ ಅವರ ಮೆಚ್ಚುವಂತಹ ಸಾಧನೆಯಾಗಿದೆ" ಎಂದು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಶ್ಲಾಘಿಸಿದರು.

ಭಾನುವಾರ ಇಂಡಿ ತಾಲೂಕಿನ ಹೆಮ್ಮೆಯ ಉದ್ಯಮಿ ನಿಂಗಣ್ಣ ಬಿರಾದಾರ್ ಅವರು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಸಂಘದ (ಕಾಸಿಯಾ) ರಾಜ್ಯ ಅಧ್ಯಕ್ಷರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಇಂಡಿ ನಗರದ ಶಂಕರ ಪಾರ್ವತಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಅದ್ಧೂರಿ ಸನ್ಮಾನ ಸಮಾರಂಭದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ನಿಂಗಣ್ಣ ಬಿರಾದಾರ್ ಅವರು ರಾಜ್ಯ ಮಟ್ಟದ ಇಂತಹದೊಂದು ಪ್ರಮುಖ ಹುದ್ದೆಗೆ ಆಯ್ಕೆಯಾದ ಹಿನ್ನೆಲೆಯಲ್ಲಿ, ಬರದ ನಾಡಿನಿಂದ ಬೆಂಗಳೂರಿನ ಗದ್ದುಗೆಯವರೆಗೆ ಉದ್ಯಮ ಕ್ಷೇತ್ರದಲ್ಲಿ ದಶಕಗಳ ಕಾಲ ನಿರಂತರವಾಗಿ ಶ್ರಮಿಸಿರುವ ನಿಂಗಣ್ಣ ಬಿರಾದಾರ್ ಅವರು ಮೂಲತಃ ಇಂಡಿ ಭಾಗದವರಾಗಿದ್ದು, ಹುಬ್ಬಳ್ಳಿಯಲ್ಲಿ ತಮ್ಮ ಉದ್ಯಮ ಸಾಮ್ರಾಜ್ಯವನ್ನು ಕಟ್ಟಿದ್ದಾರೆ. ವಿದ್ಯುತ್ ಹಾರ್ಡ್ವೇರ್ ಲೈನ್ ಸಾಮಗ್ರಿಗಳನ್ನು ಉತ್ಪಾದಿಸುವ "ಬನಶಂಕರಿ ಇಂಜಿನಿಯರ್ಸ್" ಸಂಸ್ಥೆಯ ಪಾಲುದಾರರಾಗಿರುವ ಇವರು, ಈ ಹಿಂದೆ ಉತ್ತರ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷರಾಗಿಯೂ ಯಶಸ್ವಿಯಾಗಿ ಸೇವೆ ಸಲ್ಲಿಸಿದ್ದಾರೆ. ಈ ಬಾರಿ ಇಡೀ ಕರ್ನಾಟಕದ ಸಣ್ಣ ಕೈಗಾರಿಕೆಗಳ ಒಕ್ಕೂಟದ ಸಾರಥ್ಯವನ್ನು ವಹಿಸಿಕೊಂಡಿರುವುದು ಅವರ ನಾಯಕತ್ವ ಗುಣಕ್ಕೆ ಸಾಕ್ಷಿಯಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನೂತನ ಅಧ್ಯಕ್ಷ ನಿಂಗಣ್ಣ ಬಿರಾದಾರ್ ಅವರು, "ನಮ್ಮ ರಾಜ್ಯದಲ್ಲಿ ಅದರಲ್ಲೂ ಪ್ರಮುಖವಾಗಿ ಉತ್ತರ ಕರ್ನಾಟಕ ಹಾಗೂ ಗ್ರಾಮೀಣ ಭಾಗಗಳಲ್ಲಿ ಕೈಗಾರಿಕಾ ಕ್ಷೇತ್ರ ಇನ್ನು ಹೆಚ್ಚು ಬೆಳೆಯಬೇಕಾಗಿದೆ, ಬೆಳೆಸಬೇಕಾಗಿದೆ. ಪ್ರಸ್ತುತ ಸಣ್ಣ ಉದ್ಯಮಿಗಳು ಎದುರಿಸುತ್ತಿರುವ ವಿದ್ಯುತ್, ತೆರಿಗೆ ಹಾಗೂ ಮೂಲಸೌಕರ್ಯಗಳ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹರಿಸಲು ಮತ್ತು ಹೊಸ ಕೈಗಾರಿಕಾ ನೀತಿಯಲ್ಲಿ ಸಣ್ಣ ಕೈಗಾರಿಕೆಗಳಿಗೆ ಹೆಚ್ಚಿನ ಉತ್ತೇಜನ ಸಿಗುವಂತೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ," ಎಂದು ಭರವಸೆ ನೀಡಿದರು.

ಕಾರ್ಯಕ್ರಮದ ಪಾವನ ಸಾನಿಧ್ಯವಹಿಸಿದ್ದ ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಬಸವ ಜಯಮೃತ್ಯುಂಜಯ ಸ್ವಾಮೀಜಿ ಆಶೀರ್ವಚನ ನೀಡಿ, ಕಾಸಿಯಾ ಸಂಸ್ಥೆಯ ಮೂಲಕ ರಾಜ್ಯದ ಸಣ್ಣ ಕೈಗಾರಿಕೆಗಳನ್ನು ನಿಂಗಣ್ಣ ಬಿರಾದಾರ್ ಅವರು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಲಿ, ಗಡಿ ಭಾಗದ ಇಲ್ಲಿಯೂ ಅವರ ಸಂಸ್ಥೆಯ ಮೂಲಕ ಕೈಗಾರಿಕೆಗಳನ್ನು ಸ್ಥಾಪಿಸಿ ಇಲ್ಲಿನ ಜನರಿಗೆ ಕೆಲಸ ಸಿಗುವಂತಾಗಲಿ ಎಂದು ಆಶೀರ್ವದಿಸಿದರು.

ರಾಜ್ಯ ಸಣ್ಣ ಕೈಗಾರಿಕೆ ಸಂಘದ ಹಿಂದಿನ ಅಧ್ಯಕ್ಷರಾದ ಹಣಮಂತೆಗೌಡ, ನರಸಿಂಹಮೂರ್ತಿ, ಕೆ.ಬಿ.ಅರಸಾಪುರ ಮತ್ತು ಹಾಲಿ ಉಪಾಧ್ಯಕ್ಷ ಎಚ್.ಎನ್ ರಾಮಕೃಷ್ಣ, ಜೆಡಿ ಎಸ್ ಧುರೀಣ ಬಿ.ಡಿ.ಪಾಟೀಲ, ಬಿಜೆಪಿ ಧುರೀಣ ಕಾಸುಗೌಡ ಬಿರಾದಾರ, ಶ್ರೀಶೈಲಗೌಡ ಬಿರಾದಾರ, ಶಿಕ್ಷಕ ವೈ.ಜಿ. ಬಿರಾದಾರ, ಬಿ.ವೈ. ಗೊರನಾಳ, ಮಂಜುನಾಥ ತೆನ್ನೆಳ್ಳಿ, ಭೀಮಾಶಂಕರ ಮುರಗುಂಡಿ, ಪೂರ್ವಿ ಬಿರಾದಾರ, ಶಾನ್ವಿ ಬಿರಾದಾರ ಮಾತನಾಡಿದರು.

ವೇದಿಕೆಯ ಮೇಲೆ ವಿ.ಎಚ್.ಬಿರಾದಾರ, ಜೆಡಿ–ಎಸ್ ರಾಜ್ಯ ಉಪಾಧ್ಯಕ್ಷ ನಾನಾಗೌಡ ಬಿರಾದಾರ, ಮಲ್ಲನಗೌಡ ಬಿರಾದಾರ, ಡಿ.ಆರ್.ಶಹಾ, ಶ್ರೀಮಂತ ಇಂಡಿ, ಬಿ.ಎಚ್.ಬಿರಾದಾರ, ಪ್ರಭುಗೌಡ ಬಿರಾದಾರ, ಮುತ್ತು ದೇಸಾಯಿ, ಶಾಂತುಗೌಡ ಬಿರಾದಾರ, ಜಗದೀಶ ಕ್ಷತ್ರಿ ಮತ್ತಿತರರಿದ್ದರು.

ಕಾರ್ಯಕ್ರಮದಲ್ಲಿ ಪ್ರಕಾಶ ಬಿರಾದಾರ, ರಾಜು ಹದಗಲ್, ಶಾಂತು ತೆನ್ನೆಳ್ಳಿ, ಅನೀಲಗೌಡ ಬಿರಾದಾರ, ಅಭಿನಂದನ ಕಿರಣಗಿ, ಚಂದ್ರಶೇಖರ ರೂಗಿ, ಮಂಜುನಾಥ ದೇವರ, ಶಾಂತು ತೆನ್ನೆಳ್ಳಿ, ಸಂತೋಷ ಕಕ್ಕಳಮೇಲಿ, ಸತೀಶ ಝುಂಪಾ ಸೇರಿದಂತೆ ಮತ್ತಿತರರಿದ್ದರು.

# ಜು. 29ರಂದು ಹಡಪದ ಅಪ್ಪಣ್ಣ ಜಯಂತಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶಿವಶರಣ ಶ್ರೀ ಹಡಪದ ಅಪ್ಪಣ್ಣ ಜಯಂತಿ ಆಚರಣೆಯನ್ನು ಜು.29 ರಂದು ಬೆಳಿಗ್ಗೆ 10:30 ಗಂಟೆಗೆ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಗ್ಗೆ 9.30 ಗಂಟೆಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಿಂದ ಪ್ರಮುಖ ವೃತ್ತಗಳ ಮೂಲಕ ಸಾಗಿ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದವರೆಗೆ ಭಾವಚಿತ್ರದ ಮೆರವಣಿಗೆ ನಡೆಯಲಿದೆ.

ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಡಾ. ಎಂ.ಬಿ.ಪಾಟೀಲ ಅವರು ಉದ್ಘಾಟಿಸುವರು. ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಜಿಲ್ಲೆಯ ಶಾಸಕರು, ಜನ ಪ್ರತಿನಿಧಿಗಳು ಮತ್ತು ಅಧಿಕಾರಿಗಳು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR